# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 181 | Volume - 01 Issue - 181
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 01–02–2024 ಗುರುವಾರ | Date: 01-02-2024 Thursday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



**ಒಳಪುಟದ ಸುದ್ದಿಗಳು**

ದಾವಣಗೆರೆಯಲ್ಲಿ ಫೆ.3,4ರಂದು ಪತ್ರಕರ್ತರ ಸಮ್ಮೇಳನ 2

ಶಾಲಾ ಕಾಲೇಜು ಬಳಿ ತಂಬಾಕು ಮಾರಾಟಕ್ಕೆ ಕಡಿವಾಣ ಹಾಕಿ 3

ಕುರುಡಿಹಳ್ಳಿ: ಮರಕ್ಕೆ ರಭಸವಾಗಿ ಡಿಕ್ಕಿ ಹೊಡೆದ ಕಾರು; ಇಬ್ಬರು ಸ್ಥಳದಲ್ಲೇ ಸಾವು 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಸರ್ಕಾರದ ಸೌಲಭ್ಯ ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಿ: ರಘುಮೂರ್ತಿ

» ಚಿತ್ರದುರ್ಗ

ಸರ್ಕಾರದ ಸೌಲಭ್ಯಗಳನ್ನು ಬಳಸಿಕೊಂಡು ನಾವು ಆರ್ಥಿಕ ಸಬಲರಾಗುವ ಜೊತೆಗೆ ಮಕ್ಕಳ ವಿದ್ಯಾಭ್ಯಾಸ ಮಾಡಿಸುವ ಕೆಲಸ ಮಾಡಬೇಕು ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು.

ತಾಲೂಕಿನ ತುರುವನೂರು ಹೋಬಳಿಯ ತುರುವನೂರು ಗ್ರಾಮದಲ್ಲಿ ಬುಧವಾರದಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ವತಿಯಿಂದ ಗಂಗ ಕಲ್ಯಾಣ ಯೋಜನೆಯಡಿಯಲ್ಲಿ ಪಂಪು ಮೋಟರ್ ಮತ್ತು ಕುರಿ ಮೇಕೆಗಳನ್ನು ಅರ್ಹ ಫಲಾನುಭವಿಗಳಿಗೆ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ವಿತರಣೆ ಮಾಡಿ ಮಾತನಾಡಿದರು.

ಸರ್ಕಾರದಿಂದ ಸೌಲಭ್ಯಗಳನ್ನು ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಬೇಕು. ಸರ್ಕಾರ ಲಕ್ಷಾಂತರ ವೆಚ್ಚ ವ್ಯಯ ಮಾಡುವ ಮೂಲಕ ಬಡವರಿಗೆ ಗಂಗ ಕಲ್ಯಾಣ ಯೋಜನೆಯಡಿ ಬೊರವೆಲ್ ಕೊರೆಸಿ ಪಂಪು ಮೋಟರ್ ಸೇರಿ ಅಗತ್ಯ ಎಲ್ಲಾ ಸಲಕರಣೆ ನೀಡಿ ನೀರಾವರಿಗೆ ಪ್ರೋತ್ಸಾಹ ನೀಡುವ ಕೆಲಸ ಮಾಡುತ್ತಿದೆ. ಎಲ್ಲಾ ನಿಗಮಗಳಲ್ಲಿ ಗಂಗ ಕಲ್ಯಾಣ ಯೋಜನೆ ಲಭ್ಯವಿದೆ. ಅದರಂತೆ ಇಂದು ಮಹರ್ಷಿ ವಾಲ್ಮೀಕಿ ನಿಗಮದ ವತಿಯಿಂದ 53 ಫಲಾನುಭವಿಗಳಿಗೆ ಪಂಪು ಮೋಟರ್ ವಿತರಣೆ ಮಾಡಿದ್ದೇವೆ. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಕುರಿ ಮೇಕೆ ಸಾಗಣಿಕೆ ಯೋಜನೆಯಡಿ 5 ಫಲಾನುಭವಿಗಳಿಗೆ ಕುರಿ ಮೇಕೆ ವಿತರಣೆ ಮಾಡಿದ್ದು ಹೆಣ್ಣುಮರಿಗಳ ಸಾಗಣಿಕೆಯಿಂದ ಮರಿಗಳು ಹೆಚ್ಚಳದಿಂದ ಆರ್ಥಿಕವಾಗಿ ಅನುಕೂಲವಾಗುತ್ತದೆ. ಕೆಲವರು ಸೌಲಭ್ಯ ಪಡೆದ ನಂತರ ಮಾರಟ ಮಾಡುತ್ತಾರೆ ಆ ರೀತಿ ಮಾಡಬಾರದು ಒಮ್ಮೆ ಸೌಲಭ್ಯ ದೊರಕುತ್ತದೆ. ಅದು ಬಡವರನ್ನು ಮೇಲೆತ್ತುವ ಕೆಲಸ ಸರ್ಕಾರ ಮಾಡುತ್ತಿದ್ದು ಹಂತ ಹಂತವಾಗಿ ಎಲ್ಲಾರಿಗೂ ಸೌಲಭ್ಯ ಒದಗಿಸಲು ನಮ್ಮ ಸರ್ಕಾರ ಬದ್ದವಾಗಿದೆ ಎಂದು ಹೇಳಿದರು.





ಈ ಸಂದರ್ಭದಲ್ಲಿ ತಾಲೂಕು ಪಂಚಾಯತಿ ಕಾರ್ಯನಿರ್ವಾಹಣಾಧಿಕಾರಿ ಹನುಮಂತಪ್ಪ, ಪರಿಶಿಷ್ಟ ವರ್ಗಗಳ ತಾಲೂಕು ಅಧಿಕಾರಿ ಭೀಮಯ್ಯ, ಮಹರ್ಷಿ ವಾಲ್ಮೀಕಿ ನಿಗಮದ ತಾಲೂಕು ವಿಸ್ತರಣ ಅಧಿಕಾರಿ

ಮೊಹಮ್ಮದ್ ಉಸ್ಮಾನ್, ಕಛೇರಿ ಅಧೀಕ್ಷಕ ಹೊನ್ನೂರುಸ್ವಾಮಿ, ಮಾಜಿ ಜಿ.ಪಂ.ಸದಸ್ಯ ಬಾಬುರೆಡ್ಡಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ದೀಪಾ ಮಹೇಶ್, ಉಪಾಧ್ಯಕ್ಷ ತಿಪ್ಪೇಸ್ವಾಮಿ ಮತ್ತು ಗ್ರಾಮ ಪಂಚಾಯತಿ ಸದಸ್ಯರು ಮತ್ತು ಕಾರ್ಯಕರ್ತರು ಇದ್ದರು.

## ಫಾಸ್ಟ್ ನ್ಯೂಸ್

### ಚನ್ನಮ್ಮನಾಗತಿಹಳ್ಳಿ: ಆಕಸ್ಮಿಕ ಬೆಂಕಿ 2 ಬಣವೆ ಭಸ್ಮ; 50 ಸಾವಿರ ನಷ್ಟ



» ಚಳ್ಳಕೆರೆ

ತಾಲ್ಲೂಕಿನ ಚನ್ನಮ್ಮನಾಗತಿಹಳ್ಳಿ ಗ್ರಾಮದಲ್ಲಿ ಬುಧವಾರ ಮಧ್ಯಾಹ್ನ ಮೂರರ ಸಮಯದಲ್ಲಿ ಆಕಸ್ಮಿಕ ಬೆಂಕಿ ಬಿದ್ದು ಗ್ರಾಮದ ಸಣ್ಣಚಿತ್ತಮ್ಮ ಎಂಬುವವರ ಜಮೀನಿನಲ್ಲಿದ್ದ ಜೋಳ ಮತ್ತು ಭತ್ತದ ಬಣವೆ ಸಂಪೂರ್ಣವಾಗಿ ಬೆಂಕಿಗೆ ಆಹುತಿಯಾಗಿದೆ. ಆಗ್ನಿಆಕಸ್ಮಿಕಕ್ಕೆ ಕಾರಣ ತಿಳಿದು ಬಂದಿಲ್ಲವಾದರೂ ಎರಡೂ ಬಣವೆಗಳು ಬೆಂಕಿ ಆಹುತಿಯಾಗಿ ಸುಮಾರು 50ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ ಎಂದು ತಿಳಿದುಬಂದಿದೆ. ಗ್ರಾಮ ಆಡಳಿತಾಧಿಕಾರಿ ಸಿದ್ದರಾಮಶೆಟ್ಟಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಟ್ರ್ಯಾಕ್ಟರ್ ಮತ್ತು ಬೈಕ್ ನಡುವೆ ಡಿಕ್ಕಿ: ಜೀನ್ಮರಣ ಹೋರಾಟದಲ್ಲಿ ಗಾಯಾಳು

» ಚಳ್ಳಕೆರೆ

ನಗರದ ಪಾವಗಡ ರಸ್ತೆಯ ತಿರುವಿನಲ್ಲಿ ಮೋಟಾರ್ ಬೈಕ್ ಮತ್ತು ಟ್ರ್ಯಾಕ್ಟರ್ ನಡುವೆ ಡಿಕ್ಕಿ ಸಂಭವಿಸಿ ಬೈಕ್ ಸವಾರ ದೊಡ್ಡ ಉಳ್ಳಾರ್ತಿಯ ಶಿವಶಂಕರ್(21) ತೀವ್ರವಾಗಿ ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿದ್ದಾನೆ.

ಡಿಕ್ಕಿ ರಂಭಸಕ್ಕೆ ಶಿವಶಂಕರರವರ ತಲೆ, ಕೆನ್ನೆ, ಕಿವಿಗೆ ಪೆಟ್ಟುಬಿದ್ದು ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಎಸ್‌ಎಸ್ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಅಪಘಾತವೆಸಗಿದ ಟ್ರ್ಯಾಕ್ಟರ್ ಚಾಲಕ ಟ್ರ್ಯಾಕ್ಟರನ್ನು ಸ್ಥಳದಲ್ಲೇ ಬಿಟ್ಟು ನಾಪತ್ತೆಯಾಗಿದ್ದಾನೆ.

# ಬರ ಪರಿಹಾರ ಕಾರ್ಯಗಳಿಗೆ ಹೆಚ್ಚಿನ ಒತ್ತು

■ ಚಿತ್ರದುರ್ಗ

ಜಿಲ್ಲೆಯಲ್ಲಿ ಮಳೆಯ ಕೊರತೆಯಿಂದಾಗಿ ಪ್ರಸ್ತುತ ಬರ ಪರಿಸ್ಥಿತಿ ಇದ್ದು, ಬರ ಪರಿಹಾರ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಲು ಶ್ರಮಿಸುವುದಾಗಿ ನೂತನ ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲೆಯ ಪತ್ರಕರ್ತರೊಂದಿಗೆ ಪರಿಚಯಾತ್ಮ ಭೇಟಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಈ ಮೊದಲು ಚಿತ್ರದುರ್ಗ ಉಪವಿಭಾಗಾಧಿಕಾರಿಯಾಗಿ, ಹರಪನಹಳ್ಳಿ ಉಪವಿಭಾಗಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ ಅಪರ ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ ಅಪರ ಜಿಲ್ಲಾಧಿಕಾರಿ, ರಾಜ್ಯ ಪುರಾತತ್ವ ಇಲಾಖೆ ಆಯುಕ್ತರು, ಕೆಎಸ್‌ಆರ್‌ಟಿಸಿ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ನಿರ್ದೇಶಕರು, ವಿಜಯನಗರ ಜಿಲ್ಲೆಯ ಜಿಲ್ಲಾಧಿಕಾರಿಗಳಾಗಿ ಹೀಗೆ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿ, ಇದೀಗ ಚಿತ್ರದುರ್ಗ ಜಿಲ್ಲೆಗೆ ಜಿಲ್ಲಾಧಿಕಾರಿಯಾಗಿ ಆಗಮಿಸಿದ್ದೇನೆ. ಈ ಹಿಂದೆ ಜಿಲ್ಲೆಯಲ್ಲಿ ಕೆಲಸ ಮಾಡಿದ ಅನುಭವವಿದೆ, ಹೀಗಾಗಿ ಇಲ್ಲಿನ ಸಮಸ್ಯೆಗಳ ಬಗ್ಗೆಯೂ ಮಾಹಿತಿ ಇದೆ. ಪ್ರಸ್ತುತ ಜಿಲ್ಲೆಯಲ್ಲಿ ತೀವ್ರ ಬರ ಪರಿಸ್ಥಿತಿ ಇದ್ದು, ಬರ ಪರಿಹಾರ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಸಾರ್ವಜನಿಕರು ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ದೂರದೂರುಗಳಿಂದ ತಮ್ಮ ಕೆಲಸ ಕಾರ್ಯಗಳಿಗೆ, ವಿವಿಧ ಬಗೆಯ ಅರ್ಜಿಗಳೊಂದಿಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸುತ್ತಾರೆ. ಅಂತಹವರು ಇಡೀ ದಿನ ಅಧಿಕಾರಿಗಳ ಭೇಟಿಗಾಗಿ ಕಾಯುವಂತಾಗಬಾರದು, ಅವರ ಸಮಯ ವ್ಯರ್ಥವಾಗಬಾರದು ಎಂಬ ಉದ್ದೇಶದಿಂದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಾರ್ವಜನಿಕರ ಅಹವಾಲು, ಅರ್ಜಿಗಳನ್ನು ಸ್ವೀಕರಿಸಲು ಶಾಶ್ವತ ಕೌಂಟರ್ ಒಂದನ್ನು ಸ್ಥಾಪಿಸಲಾಗುವುದು. ಸಾರ್ವಜನಿಕರು ಸಲ್ಲಿಸುವ ಅರ್ಜಿಗಳನ್ನು ಪಡೆದು, ಅವರಿಗೆ ಸ್ವೀಕೃತಿ ನೀಡಲಾಗುವುದು. ಅಲ್ಲದೆ ಅಂತಹ ಅರ್ಜಿಗಳನ್ನು ಗಣಕೀಕರಣಗೊಳಿಸಿ, ಕಾಲಮಿತಿಯಲ್ಲಿ ವಿಲೇವಾರಿ ಮಾಡಲು, ಅರ್ಜಿಗಳಿಗೆ ಸ್ಪಂದಿಸಲು ವಿಶೇಷ ಆದ್ಯತೆ ನೀಡಲಾಗುವುದು. ಅರ್ಜಿಗಳ ವಿಲೇವಾರಿ ಕುರಿತಂತೆ ಅಧಿಕಾರಿಗಳ ಸಭೆ ನಡೆಸಿ, ಪರಿಶೀಲನೆ ಮಾಡಲಾಗುವುದು. ಜಿಲ್ಲಾಧಿಕಾರಿಯಾಗಿ ಕಚೇರಿಗೆ ಮಾತ್ರ ಸೀಮಿತವಾಗದೇ, ಗ್ರಾಮಗಳಿಗೆ ತೆರಳಿ, ಕ್ಷೇತ್ರಗಳಿಗೆ ಭೇಟಿ ನೀಡಿ ಜನರಿಂದಲೇ ಮಾಹಿತಿ ಪಡೆಯಲು ಬಯಸುತ್ತೇನೆ. ಜಿಲ್ಲೆಯಾದ್ಯಂತ ಪ್ರವಾಸ ಕೈಗೊಂಡು ಸ್ಥಳದಲ್ಲಿಯೇ ಸಾರ್ವಜನಿಕರ ಸಮಸ್ಯೆಗಳಿಗೆ ಸಾಧ್ಯವಾದಷ್ಟು ಮಟ್ಟಿಗೆ ಪರಿಹಾರ ಒದಗಿಸಲು ಶ್ರಮಿಸುವ ಮೂಲಕ ಜನಸ್ನೇಹಿ ಆಡಳಿತ ನೀಡುವುದಾಗಿ ನೂತನ ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಹೇಳಿದರು.

# ಅಂತರ್ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಾಣೆಹಳ್ಳಿ ಸಜ್ಜು



» ತುಂಬಿನಕೆರೆ ಬಸವರಾಜ್

ಹೊಸದುರ್ಗ : ಕನ್ನಡ ಸಾಹಿತ್ಯ ಲೋಕಕ್ಕೂ, ಶಿವ ಸಂಚಾರದ ಮೂಲಕ ದೇಶದಾದ್ಯಂತ ರಂಗ ಚಟುವಟಿಕೆಗಳನ್ನು ಪಸರಿಸಿದ ರಂಗ ಜಂಗಮನ ತವರು ಸಾಣೆಹಳ್ಳಿಗೂ ಅವಿನಾಭಾವ ನಂಟು, ಸಾಣೆಹಳ್ಳಿಗೆ ಬರುವ ಭಕ್ತರು ಇಲ್ಲಿ ಪ್ರತಿದಿನ ಒಂದಲ್ಲ ಒಂದು ಅನುಭವವನ್ನು ಪಡೆಯುತ್ತಲೇ ಇರುತ್ತಾರೆ. ಚಿಕ್ಕಮಗಳೂರು ಚಿತ್ರದುರ್ಗ ಜಿಲ್ಲಾ ಗಡಿಗೆ ಹೊಂದಿಕೊಂಡಿರುವ ಸಾಣೆಹಳ್ಳಿ ಇಲ್ಲಿನ ರಂಗ ಜಂಗಮರಾದ ಪೂಜ್ಯ ಪಂಡಿತಾರಾಧ್ಯ ಶ್ರೀಗಳು ಮಾಡುತ್ತಿರುವ ರಂಗ ಕೃಷಿ,ಮತ್ತು ಸಾಹಿತ್ಯ ಕೃಷಿ ಬಗೆದಷ್ಟು ಆಳವಿದೆ. ರಾಜ್ಯದಲ್ಲಿಯೇ ಮೊದಲ ಅಂತರ್ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಈ ಬಾರಿ ಬಯಲು ಸೀಮೆಯ ಅರೆ ಮಲೆನಾಡು ಸಾಣೆಹಳ್ಳಿಯಲ್ಲಿ ನಡೆಯುತ್ತಿರುವುದು ಸ್ವಾಗತರ್ಹ. ಚಿಕ್ಕಮಗಳೂರು ಮತ್ತು ಚಿತ್ರದುರ್ಗ ಜಿಲ್ಲೆಯ ಸಾಹಿತ್ಯಾಸಕ್ತರು ಒಟ್ಟುಗೂಡಿ ಒಮ್ಮೆ ಸಾಣೆಹಳ್ಳಿಯ ಪಂಡಿತರಾಧ್ಯ ಶ್ರೀ ಬೇಟಿ ಮಾಡಿ ನೀವು ಈ ಅಂತ ಜಿಲ್ಲಾ ಸಮ್ಮೇಳನದ ಅಧ್ಯಕ್ಷರಾಗಬೇಕೆಂದು ಸಂಪರ್ಕಿಸಿದಾಗ ಖಡಾ ಖಂಡಿತವಾಗಿ ಆ ಅಧ್ಯಕ್ಷ ಸ್ಥಾನವನ್ನ ತಿರಸ್ಕರಿಸಿದರು.


ಪುಟ ↘ 2


## ಪ್ರಮುಖ ಸುದ್ದಿ



ವಿಶೇಷ ವರದಿಗಳ ಸ್ಪೆಷಲಿಸ್ಟ್

# ಹಿರಿಯ ಪತ್ರಕರ್ತ ಅಹೋಬಳಪತಿಗೆ ಗುಡಿಹಳ್ಳಿ ನಾಗರಾಜ್ ಪ್ರಶಸ್ತಿ

» ನಮ್ಮ ಜನ ಸಮಾಚಾರ

ಚಿತ್ರದುರ್ಗ: ಒಬ್ಬ ಪತ್ರಕರ್ತ ವೃತ್ತಿಯಲ್ಲಿ ತಮ್ಮ ವರದಿಗಳ ಮೂಲಕ ಹೆಸರು ಸದ್ದು ಮಾಡಬೇಕು.ಸುದ್ದಿಗಳು ಸಮಾಜಮುಖಿ ಮತ್ತು ಜನರ ಸಮಸ್ಯೆಗಳನ್ನು ಒತ್ತು ಬರುವ ಪತ್ರಿಕೆಗಳನ್ನು ಜನರು ಬಯಸುತ್ತಾರೆ. ಅಂತಹ ವರದಿಗಳನ್ನು ಮಾಡುವ ಮೂಲಕ ಓದುಗರಿಗೆ ನ್ಯಾಯ ಒದಗಿಸುವ ಹಂಬಲ ಪತ್ರಕರ್ತರಿಗೆ ಇರಬೇಕು. ಆ ನಿಟ್ಟಿನಲ್ಲಿ ನಿತ್ಯ ಹೊಸತನದೊಂದಿಗೆ ಕೆಲಸ ಆರಂಭಿಸಿ ವಿಶೇಷ ಲೇಖನಗಳಿಗೆ ಮೊದಲ ಆದ್ಯತೆ ನೀಡಿದಂತಹ ಚಿತ್ರದುರ್ಗ ಜಿಲ್ಲೆಯ ಹಿರಿಯ ಪತ್ರಕರ್ತ ಹಾಗೂ ವಿಜಯ ಕರ್ನಾಟಕ ಪತ್ರಿಕೆಯ ಚಿತ್ರದುರ್ಗ ಜಿಲ್ಲೆಯ ವಿಶೇಷ ವರದಿಗಾಗಿ ಸೇವೆ ಸಲ್ಲಿಸುತ್ತಿರು ಸರಳತೆ ಮೈಗೂಡಿಕೊಂಡಿರುವ ಎಂ.ಎನ್. ಅಹೋಬಳಪತಿ ಅವರಿಗೆ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ ವತಿಯಿಂದ ದಾವಣಗೆರೆಯಲ್ಲಿ ನಡೆಯುತ್ತಿರುವ 38 ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಪ್ರದಾನ ಮಾಡುವ ವಾರ್ಷಿಕ ಗುಡಿಹಳ್ಳಿ ನಾಗರಾಜ್ ಪ್ರಶಸ್ತಿ ಭಾಜನರಾಗಿದ್ದಾರೆ.

ಒಬ್ಬ ವರದಿಗಾರ ವರದಿಗಳನ್ನು ಜನರು ಗಮನಿಸುತ್ತಾರೆ.ಈ ವರದಿಗಾರ ಯಾರ ಪರ ವಿರೋಧ ಎಂಬ ಲೆಕ್ಕಚಾರ ಜನರು ಹಾಕುತ್ತಾರೆ. ಅಂತಹ ಯಾವ ಮುಲಾಜಿಲ್ಲದೇ ಬರವಣಿಗೆ ಬದಲಾವಣೆ ಕಡೆ ಎಂಬ ತತ್ವ ಅಳವಡಿಸಿಕೊಂಡು ಯಾವುದಕ್ಕೂ ಯೋಚನೆ ಮಾಡದೇ ಜನರ ಸಮಸ್ಯೆಗಳ ಕಡೆ ಬೆಳಕು ಚೆಲ್ಲುವ ವರದಿಗಳನ್ನು ಹೆಚ್ಚು ಮಾಡ ತೊಡಗಿದರು. ಮೂಲಭೂತ ಸಮಸ್ಯೆ ವರದಿಗಳು, ಯಶಸ್ವಿ ಕೃಷಿ ಮಾಡಿದ ರೈತರ ವರದಿಗಳು, ಕಡಿಮೆ ಆದಾಯದಲ್ಲಿ ಹೆಚ್ಚಿನ ಲಾಭ ಗಳಿಸಿದ ಉದ್ಯಮಿಗಳ ವರದಿ, ಸರ್ಕಾರದ ಕಳಪೆ ಕಾಮಗಾರಿ ವರದಿ, ಸೌಲಭ್ಯ ವಂಚಿತರ ಧ್ವನಿಯಾಗುವ ವರದಿ ಸೇರಿ ನಾನಾ ಪ್ರಕರಣಗಳನ್ನು ಗುರುತಿಸಿ ವರದಿ ಮಾಡಿ ತಮ್ಮ ಹಿರಿತನ ಮೆರೆಯುತ್ತಿರುವ ಇವರು ನಡೆದು ಬಂದ ದಾರಿ ಹೋರಟ ಹಿನ್ನಲೆ ಇವರ ಬರವಣಿಗೆಗೆ ಸ್ಪೂರ್ತಿ ಎಂದರೆ ತಪ್ಪಗಲಾರದು. ಇಂತಹ ಹಿರಿಯ ಪತ್ರಕರ್ತರಿಗೆ ಗುಡಿಹಳ್ಳಿ ನಾಗರಾಜ್ ಪ್ರಶಸ್ತಿ ದೊರಕಿರುವುದು ಚಿತ್ರದುರ್ಗ ಜಿಲ್ಲೆಗೆ ಹೆಮ್ಮೆಯ ವಿಚಾರವಾಗಿದೆ.

**ಪರಿಚಯ:** ಎಂ.ಎನ್.ಅಹೋಬಲಪತಿ ಅವರು ಮೂಲತ: ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ರಂಗಸಮುದ್ರ ಗ್ರಾಮದವರು. ಇವರು ಪ್ರಾಥಮಿಕ ಶಿಕ್ಷಣವನ್ನು ತಮ್ಮ ಹುಟ್ಟೂರು ರಂಗಸಮುದ್ರದಲ್ಲಿ ಮುಗಿಸಿದರು. ನಂತರ ಪ್ರೌಡ ಶಾಲಾ ಶಿಕ್ಷಣವನ್ನು ತುಮಕೂರಿನ ನಗರದ ವಾಲ್ಮೀಕಿ ರೆಸಿಡೆನ್ಸಿಯಲ್ ಶಾಲೆ ನಂತರ ಪಿ.ಯು.ಸಿ ಯನ್ನು ತಮ್ಮ ಹುಟ್ಟೂರು ಪಕ್ಕದಲ್ಲಿರುವ ಕ್ಯಾದಿಗುಂಟೆ ಗ್ರಾಮದಲ್ಲಿ ಮುಗಿಸಿದರು. ಕಷ್ಟಗಳ ನಡುವೆಯೇ ಹೆಚ್ಚಿನ ಅಭ್ಯಾಸ ಮಾಡಬೇಕು ಎಂಬ ಹಂಬಲದೊಂದಿಗೆ ಇವರು ಪದವಿ ಶಿಕ್ಷಣಕ್ಕಾಗಿ ಚಿತ್ರದುರ್ಗದ ಆರ್ಟ್ಸ್ ಕಾಲೇಜಿ ದಾಖಲಾಗಿ ಪದವಿ ಶಿಕ್ಷಣ ಪಡೆದರು.

ಭವಿಷ್ಯ ಪತ್ರಕರ್ತ ವೃತ್ತಿ ಆಯ್ಕೆಯನ್ನು ದೊಡ್ಡ ಸವಾಲು ಎಂಬ ತೊಂಬತ್ತರ ದಶಕದ ಮಧ್ಯಭಾಗದಿಂದ ಚಿತ್ರದುರ್ಗದ ಸುದ್ದಿಗಿಡುಗ ಪತ್ರಿಕೆಯಲ್ಲಿ ಪತ್ರಿಕಾ ವೃತ್ತಿ ಆರಂಭಿಸಿದರು.1998 ರ ನಂತರ 2005 ರವರೆಗೆ ನೊಂದ ಸಮುದಾಯದ ಪ್ರತಿನಿಧಿಯಾಗಿ ಹೋರಾಟವನ್ನೇ ಉಸಿರಾಗಿಸಿಕೊಂಡು ತಮ್ಮನ್ನು ತಾವು ಅರ್ಪಣೆ ಮಾಡಿಕೊಂಡು ಮೊದಲೇ ಹೋರಟ ಗುಣದ ಮುನ್ಸೂಚನೆ ಅವರ ಚಟುವಟಿಕೆಯಲ್ಲಿ ಇದ್ದಿದ್ದು ಇವರನ್ನು ಹೋರಾಟಗಾರ ಯುವ ಪತ್ರಕರ್ತ ಎಂ. ಎನ್ ಅಹೋಬಲಪತಿ ಎಂಬ ಮಾತುಗಳು ಆ ಕಾಲದಲ್ಲಿ ಕೇಳಿಬರುತ್ತಿತ್ತು.

ಇವರು ಚಿತ್ರದುರ್ಗ ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಹೋರಾಡಿದರು ಪರಿಶಿಷ್ಟ ಜಾತಿ – ಪರಿಶಿಷ್ಟ ಪಂಗಡದ ಮಕ್ಕಳು ಹಾಸ್ಟೆಲ್ ಗಳಲ್ಲಿ ತಿಂಡಿ ಹೋರಾಟ ಮಾಡಿ ಆ ಹೋರಾಟದಲ್ಲಿ ಯಶಸ್ವಿಯಾದರು ಆ ಹೋರಾಟದ ಫಲವಾಗಿ ಎಲ್ಲಾ ಹಾಸ್ಟೆಲ್ ಗಳಲ್ಲಿ ಬೆಳಗಿನ ಉಪಹಾರ ಜಾರಿಯಾಯಿತು.

ನೂರಾರು ವಿದ್ಯಾರ್ಥಿಗಳನ್ನ ಜನಪರ ಚಳುವಳಿಗಳಲ್ಲಿ ಭಾಗವಹಿಸುವಂತೆ ಪ್ರೇರೇಪಸಿದರು.

ಹಾಸ್ಟೆಲ್ ಮಕ್ಕಳ ತಿಂಡಿ ಮತ್ತು ಸೌಲಭ್ಯಗಳ ವಿಚಾರಕ್ಕೆ ಬೀದಿಗಿಳಿದು ಹಲವು ಸವಾಲುಗಳನ್ನು ಎದುರಿಸಿದ ಇವರು ವಿದ್ಯಾರ್ಥಿ ದೆಸೆಯಿಂದಲೆ ಹೋರಾಟವನ್ನ ಮೈಗೂಡಿಸಿಕೊಂಡು ಬೆಳೆದರು. ಇವರಲ್ಲಿ ಹಡಗಿದ್ದ ಹೋರಟದ ಮನೋಭಾವಕ್ಕೆ ಸಾಕ್ಷಿ ಎಂಬಂತೆ ರಾಜ್ಯದ ನಾನಾ ಜಿಲ್ಲೆಗಳ ಹೋರಾಟಗಳಲ್ಲಿ ಭಾಗವಹಿಸಿ ಗುರುತಿಸಿಕೊಂಡವರು.

**ಹೋರಟದ ಹಾದಿ:** ಬೆಂಗಳೂರು, ಚಿಕ್ಕಮಗಳೂರು ಚಿತ್ರದುರ್ಗದಲ್ಲಿ ಹೋರಾಟಗಳಲ್ಲಿ ಗುರುತಿಸಿಕೊಂಡಿದ್ದ ಇವರು ಹೋರಾಟಗಾರರ ಕೊಂಡಿಯಾಗಿ ಬೆಳೆದು ನಿಂತರು. ಅಷ್ಟೆಯಲ್ಲದೆ ಚಿನ್ನದ ಗಣಿ ಕಾರ್ಮಿಕರು ಹೋರಾಟ, ಬೆಂಗಳೂರು ಮೈಸೂರ್ ಇಂಫ್ರಾಸ್ಟ್ರಕ್ಚರ್ ಕಾರಿಡಾರ್, ಆದಿವಾಸಿ ಗಿರಿಜನ ಹೋರಾಟ, ಕೋಮು ಸೌಹಾರ್ದ ಚಟುವಟಿಕೆಗಳ ಜೊತೆ ಮಾಡಿದ ಹೋರಟಗಳಲ್ಲಿ ಆಹೋಬಲಪತಿ ಅವರ ಪಾತ್ರ ದೊಡ್ಡದಿದ್ದರು ಎಂದು ಸಹ ಅವರು ಎಲೆಮರೆಯ ಕಾಯಿಯಂತೆ ಹೋರಟಕಕ್ಕೆ ಫಲ ಹುಡುಕಿದರು.

ರೈತರು, ಕಾರ್ಮಿಕರು ಆದಿವಾಸಿಗಳು ಹಾಗೂ ಮಹಿಳೆಯರ ಪರ ಎರಡು ದಶಕಗಳಿಗೂ ಹೆಚ್ಚು ಕಾಲ ತಮ್ಮನ್ನು ತಾವು ತೊಡಗಿಸಿಕೊಂಡಿದ್ದು, ಸಾಮಾಜಿಕ ಸಮಾನತೆಗಾಗಿ ಅಗಲಿರುಳು ಶ್ರಮಿಸಿ ಹೋರಾಟಗಳನ್ನು ರೂಪಿಸಿದವರು. ಬಡ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕಾಗಿ ಆರ್ಥಿಕ ನೆರವು ಸಂಕಷ್ಟ ಹೇಳಿಕೊಂಡವರಿಗೆ ಸಹಾಯಾಸ್ತ ನೀಡುತ್ತಾ ಬಂದಿದ್ದಾರೆ.


ಪುಟ ↘ 2

## ಫಾಸ್ಟ್ ನ್ಯೂಸ್

### ಹಿರಿಯ ಪತ್ರಕರ್ತ ಅಹೋಬಳಪತಿಗೆ ಗುಡಿಹಳ್ಳಿ ನಾಗರಾಜ್ ಪ್ರಶಸ್ತಿ

» ಮೊದಲ ಪುಟದಿಂದ

**ವೃತ್ತಿ ಜೀವನ:** ಪ್ರಸ್ತುತ ವಿಜಯ ಕರ್ನಾಟಕ ದಿನಪತ್ರಿಕೆಯ ಚಿತ್ರದುರ್ಗ ಜಿಲ್ಲೆಯ ವಿಶೇಷ ಪ್ರತಿನಿಯಾಗಿ ಕಾರ್ಯನಿರ್ವಹಿಸುತ್ತಿರುವ ಎಂ.ಎನ್. ಅಹೋಬಳಪತಿ ತೊಂಬತ್ತರ ದಶಕದ ಮಧ್ಯಭಾಗದಿಂದ ಚಿತ್ರದುರ್ಗದ ಸುದ್ದಿಗಿಡುಗ ದಿನಪತ್ರಿಕೆ ಪತ್ರಿಕಾ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದಾರೆ. 1998 ರ ನಂತರ ಗಣಿ ಕಾರ್ಮಿಕರು, ಆದಿವಾಸಿ, ಗಿರಿಜನ ಹೋರಾಟ, ಕೋಮು ಸೌಹಾರ್ದ ಚಟುವಟಿಕೆಗಳ ಜೊತೆ ಹವ್ಯಾಸಿ ಪತ್ರಕರ್ತರಾಗಿ ದುಡಿದಿದ್ದಾರೆ.

ಗೌರಿ ಲಂಕೇಶ್, ಇಂಡಿಯನ್ ಎಕ್ಸ್‌ಪ್ರೆಸ್, ಕನ್ನಡಪ್ರಭ, ಸಂಡೇ ಇಂಡಿಯನ್ ನಲ್ಲಿ ವೃತ್ತಿ ನಿರ್ವಹಿಸಿದ್ದಾರೆ.

ಕರ್ನಾಟಕ ಸರ್ಕಾರದ "ಕಣಜ" ಅಂತರ್ಜಾಲ ಜ್ಞಾನಕೋಶದಲ್ಲಿಯೋಜನಾಸಹಾಯಕರಾಗಿಯೂ ಕೆಲಸ ಮಾಡಿದ್ದಾರೆ. ವಿಜಯ ಕರ್ನಾಟಕದಲ್ಲಿ ವಿಶೇಷ ವರದಿಗಳ ಮೂಲಕ ಗ್ರಾಮೀಣ ರೈತರು, ಕಾರ್ಮಿಕರು, ಪ್ರಚಲಿತ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿ ಜನರ ಧ್ವನಿಯನ್ನು ದಾಖಲಿಸುತ್ತಾ ಬಂದಿರುವ ಇವರ ಕಾರ್ಯ ಗುರುತಿಸಿ ಕಳೆದ ವರ್ಷ ಜಿಲ್ಲಾ ವಾಲ್ಮೀಕಿ ಪುರಸ್ಕೃತರಾಗಿ ಸಹ ಹೊರಹೊಮ್ಮಿದ್ದಾರೆ.

### ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಜೂಜಾಟ : ಐವರ ವಶ

» ಚಳ್ಳಕೆರೆ

ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೋಡ್ಲಾರಹಟ್ಟಿ ಗ್ರಾಮದ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಜೂಜಾಟವಾಡುತ್ತಿದ್ದ ಅದೇ ಗ್ರಾಮದ ಬಿ.ವೆಂಕಟೇಶ ಇತರೆ ನಾಲ್ವರನ್ನು ವಶಕ್ಕೆಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 1200ರೂ ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಪಿಎಸ್‌ಐ ಶಿವರಾಜ್ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ಧಾರೆ.

### ಫೆ. 2ರಂದು ಮೈದಾನ ಪ್ರದೇಶದಲ್ಲಿ ಗೇರು ಕೃಷಿ ಕುರಿತು ಜಿಲ್ಲಾ ಮಟ್ಟದ ವಿಚಾರ ಸಂಕಿರಣ

» ಚಿತ್ರದುರ್ಗ

ಶಿವಮೊಗ್ಗ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಗೋಡಂಬಿ ತಂತ್ರಜ್ಞಾನ ಕೇಂದ್ರ, ಚಿತ್ರದುರ್ಗ ಕೃಷಿ ತಂತ್ರಜ್ಞರ ಸಂಸ್ಥೆ, ರೆಡ್ಡಿ ಸಮಾಜ ಹಾಗೂ ತೋಟಗಾರಿಕೆ ಇಲಾಖೆ ಇವರ ಸಹಯೋಗದಲ್ಲಿ ಮೈದಾನ ಪ್ರದೇಶದಲ್ಲಿ ಗೇರು ಕೃಷಿ ಕುರಿತು ಜಿಲ್ಲಾಮಟ್ಟದ ವಿಚಾರ ಸಂಕಿರಣವನ್ನು ಫೆ.02ರಂದು ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರದ ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ. ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಕುಲಪತಿ ಆರ್.ಸಿ.ಜಗದೀಶ್ ಕಾರ್ಯಕ್ರಮ ಉದ್ಘಾಟಿಸುವರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಬಿ.ಮಂಜುನಾಥ್ ಅಧ್ಯಕ್ಷತೆ ವಹಿಸುವರು. ಗೋಡಂಬಿ ಮತ್ತು ಕೋಕೋ ಅಭಿವೃದ್ಧಿಯ ವಿಶ್ರಾಂತ ನಿರ್ದೇಶಕ ಡಾ.ವೆಂಕಟೇಶ್ ಹುಬ್ಬಳ್ಳಿ ವಾಸ್ತವಿಕ ನುಡಿಗಳನ್ನಾಡುವರು. ರಾಯಚೂರು ಕೃಷಿ ವಿದ್ಯಾಲಯ ಕುಲಪತಿ ಎಂ.ಹನುಮಂತಪ್ಪ ತಾಂತ್ರಿಕ ಕೈಪಿಡಿ ಬಿಡುಗಡೆ ಮಾಡುವರು. ಮುಖ್ಯ ಅತಿಥಿಗಳಾಗಿ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಸಂಶೋಧನಾ ನಿರ್ದೇಶಕ ಬಿ.ಎಂ. ದುಶ್ಯಂತ ಕುಮಾರ, ವಿಸ್ತರಣಾ ನಿರ್ದೇಶಕ ಕೆ.ಟಿ. ಗುರುಮೂರ್ತಿ, ಚಿತ್ರದುರ್ಗ ಕೃಷಿ ತಂತ್ರಜ್ಞ ಸಂಸ್ಥೆ ಅಧ್ಯಕ್ಷ ಜಿ.ಸಿ.ರಂಗಸ್ವಾಮಿ, ತೋಟಗಾರಿಕಾ ಇಲಾಖೆ ಉಪನಿರ್ದೇಶಕಿ ಸವಿತ, ಶಿವಮೊಗ್ಗದ ನವಿಲೆ ವಲಯ ಕೃಷಿ ಮತ್ತು ತೋಟಗಾರಿಕೆ ಸಹ ಸಂಶೋಧನಾ ನಿರ್ದೇಶಕ ಡಾ.ಎಸ್. ಪ್ರದೀಪ್, ಬಬ್ಬೂರು ಫಾರ್ಮ್ ವಲಯ ಕೃಷಿ ಮತ್ತು ತೋಟಗಾರಿಕೆ ಸಹ ಸಂಶೋಧನಾ ನಿರ್ದೇಶಕ ಸುರೇಶ್ ಡಿ. ಏಕಬೋಟೆ, ಚಿತ್ರದುರ್ಗ ರಡ್ಡಿ ಸಮಾಜದ ಅಧ್ಯಕ್ಷ ಸಿ. ರಾಘವ ರೆಡ್ಡಿ, ಕೃಷಿ ತಂತ್ರಜ್ಞ ಸಂಸ್ಥೆ ಉಪಾಧ್ಯಕ್ಷ ಕೆ. ಶ್ರೀನಿವಾಸ್ ರೆಡ್ಡಿ, ಕಾರ್ಯದರ್ಶಿ ವೀರಭದ್ರ ರೆಡ್ಡಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಹುತಾತ್ಮರ ದಿನಾಚರಣೆಯಲ್ಲಿ ಮೌನಾಚರಣೆ

» ದಾವಣಗೆರೆ

ಹುತಾತ್ಮರ ದಿನಾಚರಣೆ ಅಂಗವಾಗಿ ಜನವರಿ 30 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ, ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೌನಾಚರಣೆ ಮಾಡುವ ಮೂಲಕ ಹುತಾತ್ಮರಿಗೆ ನಮನ ಸಲ್ಲಿಸಲಾಗಿತು. ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ಸೇರಿದಂತೆ ವಿವಿಧ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಪತ್ರಕರ್ತರೆಲ್ಲಾ ಒಂದಾಗಿ ರಾಜ್ಯದ ಪತ್ರಕರ್ತರಿಗೆ ಆತಿಥ್ಯ ನೀಡೋಣ– ಎಸ್.ಎಸ್.ಮಲ್ಲಿಕಾರ್ಜುನ ಕರೆ

# ದಾವಣಗೆರೆಯಲ್ಲಿ ಫೆ.3,4ರಂದು ಪತ್ರಕರ್ತರ ಸಮ್ಮೇಳನ

» ದಾವಣಗೆರೆ

ನಗರದಲ್ಲಿ ನಡೆಯಲಿರುವ 38ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನವನ್ನು ಅರ್ಥಪೂರ್ಣ ಮತ್ತು ಯಶಸ್ವಿಯನ್ನಾಗಿಸುವ ನಿಟ್ಟಿನಲ್ಲಿ ರೂಪುರೇಷೆಗಳು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದ್ದಾರೆ.

ಫೆಬ್ರವರಿ 3 ಮತ್ತು 4ರಂದು ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಕಲ್ಯಾಣ ಮಂಟಪದಲ್ಲಿ ಏರ್ಪಾಡಾಗಿರುವ ಈ ಸಮ್ಮೇಳನದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಸುಮಾರು ನಾಲ್ಕೂವರೆ ಸಾವಿರಕ್ಕೂ ಹೆಚ್ಚು ಮಾಧ್ಯಮ ಮಿತ್ರರು ಭಾಗವಹಿಸಲಿದ್ದು, ಒಟ್ಟಿನಲ್ಲಿ ಈ ಸಮ್ಮೇಳನವು ಪತ್ರಕರ್ತರ ಹಬ್ಬ – ಜಾತ್ರೆ ಎಂತಾಗಲಿದೆ ಎಂದು ಅವರು ಬಣ್ಣಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಘಟಕದ ನೇತೃತ್ವ ಮತ್ತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ದಾವಣಗೆರೆ ಜಿಲ್ಲಾ ಘಟಕದ ಆತಿಥ್ಯ ಹಾಗೂ ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಸಹಯೋಗದಲ್ಲಿ ಈ ಸಮ್ಮೇಳನ ಆಯೋಜನೆಗೊಂಡಿದೆ ಎಂದು ಸಚಿವ ಎಸ್ಸೆಸ್ಸೆಂ ಅವರು ತಮ್ಮ 'ಶಿವ–ಪಾರ್ವತಿ' ನಿವಾಸದಲ್ಲಿ ಇಂದು ಸಂಜೆ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

ಈ ಸಮ್ಮೇಳನವು 31 ವರ್ಷಗಳ ಹಿಂದೆ ಚಿತ್ರದುರ್ಗ ಜಿಲ್ಲೆಯ ವ್ಯಾಪ್ತಿಯಲ್ಲಿ ತಾಲ್ಲೂಕು ಆಗಿದ್ದ ದಾವಣಗೆರೆಯಲ್ಲಿ 1992ರಲ್ಲಿ ರಾಜನಹಳ್ಳಿ ಹನುಮಂತಪ್ಪ ಧರ್ಮಶಾಲೆಯಲ್ಲಿ ನಡೆದಿತ್ತು. ಈಗ ದಾವಣಗೆರೆ ರಚನೆಯಾದ 25 ವರ್ಷಗಳ ನಂತರ ಇದೇ ಪ್ರಪ್ರಥಮ ಬಾರಿಗೆ ಸಮ್ಮೇಳನ ನಡೆಯುತ್ತಿರುವುದು ದಾವಣಗೆರೆ ಜಿಲ್ಲೆಗೆ ಹೆಮ್ಮೆಯ ಸಂಗತಿಯಾಗಿದೆ.

ಮೆರವಣಿಗೆ : ಫೆಬ್ರವರಿ 3ರ ಬೆಳಿಗ್ಗೆ 9 ಗಂಟೆಗೆ ಹರ್ಡೇಕರ್ ಮಂಜಪ್ಪ, ಮಹಾತ್ಮ ಗಾಂಧೀಜಿ, ಡಾ. ಬಿ.ಆರ್. ಅಂಬೇಡ್ಕರ್, ಬಾಬು ಜಗಜೀವನರಾಂ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಿದ ನಂತರ ಶ್ರೀ ಜಯದೇವ ಮುರುಘರಾಜೇಂದ್ರ ವೃತ್ತದಿಂದ ಮಾಧ್ಯಮದ ಮಿತ್ರರ ಬೃಹತ್ ಮೆರವಣಿಗೆ ನಡೆಯಲಿದೆ. ಸಾರೋಟನಲ್ಲಿ ಇರಿಸಲಾಗುವ ವೃಕ್ಷದ ಆಕೃತಿಯಲ್ಲಿ ಬರುವ ರಂಬೆ–ಕೊಂಬೆಗಳಲ್ಲಿ ಎಲ್ಲಾ ಪತ್ರಿಕೆಗಳ ಶಿರೋನಾಮೆಗಳನ್ನು ಬಿಂಬಿಸಲಾಗುವುದು. ಮೆರವಣಿಗೆಯಲ್ಲಿ ಕಲಾ ತಂಡಗಳು ಗಮನ ಸೆಳೆಯಲಿವೆ. ಪತ್ರಕರ್ತರು, ಸಾಹಿತಿಗಳು, ಕನ್ನಡಪರ ಹೋರಾಟಗಾರರು ಮೆರವಣಿಗೆಯಲ್ಲಿ ಭಾಗವಹಿಸಲಿದ್ದಾರೆ.



ಉದ್ಘಾಟನೆ : ಮೆರವಣಿಗೆ ನಂತರ ಬೆಳಿಗ್ಗೆ 10.30 ಗಂಟೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಹಿರಿಯ ಶಾಸಕರಾದ ಶಾಮನೂರು ಶಿವಶಂಕರಪ್ಪ ಅವರ ಘನ ಉಪಸ್ಥಿತಿ ಮತ್ತು ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ಅಧ್ಯಕ್ಷತೆಯಲ್ಲಿ ಛಾಯಾಚಿತ್ರ ಪ್ರದರ್ಶನವನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸಲಿದ್ದಾರೆ. ಸ್ಮರಣ ಸಂಚಿಕೆಯನ್ನು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಬಿಡುಗಡೆ ಮಾಡುವರು. ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹಾದೇವಪ್ಪ ಅವರು ವಸ್ತು ಪ್ರದರ್ಶವನ್ನು, ಕೈಗಾರಿಕ ಸಚಿವ ಎಂ.ಬಿ. ಪಾಟೀಲ್ ಅವರು ವ್ಯಂಗ್ಯ ಚಿತ್ರ ಪ್ರದರ್ಶನದ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ. ಜಿಲ್ಲೆಯ ಎಲ್ಲಾ ಶಾಸಕರೂ, ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು, ಜಿಲ್ಲೆಯ ಹಿರಿಯ ಅಧಿಕಾರಿಗಳು ಮುಖ್ಯ ಅತಿಥಿಗಳಾಗಿದ್ದಾರೆ.

ಗೋಷ್ಠಿ : ಸಮಾರಂಭದ ಉದ್ಘಾಟನೆಯ ನಂತರ ಮಧ್ಯಾಹ್ನ 2 ಗಂಟೆಗೆ 'ಕೃತಕ ಬುದ್ಧಿಮತ್ತೆ ಮತ್ತು ಮಾಧ್ಯಮಗಳ ಭವಿಷ್ಯ' ಮತ್ತು ಸಂಜೆ 4 ಗಂಟೆಗೆ 'ಪತ್ರಿಕೆಗಳು : ಹಿಂದೆ–ಇಂದು–ಮುಂದು' ವಿಷಯಗಳ ಕುರಿತಂತೆ ಗೋಷ್ಠಿಗಳು ಜರುಗಲಿವೆ. ಕೊಪ್ಪಳ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಬಿ.ಕೆ. ರವಿ, ಹಿರಿಯ ಪತ್ರಕರ್ತ ಈಶ್ವರ ದೈದೋಟ ಸೇರಿದಂತೆ ನಾಡಿನ ಹಿರಿಯ ಪತ್ರಕರ್ತರು ಗೋಷ್ಠಿಗಳನ್ನು ನಡೆಸಿಕೊಡಲಿದ್ದಾರೆ. ಅದೇ ದಿನ ಸಂಜೆ 6 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ದಿನಾಂಕ 4ರ ಭಾನುವಾರ ಬೆಳಿಗ್ಗೆ 9.45ಕ್ಕೆ ಪ್ರತಿನಿಧಿಗಳ ಸಮಾವೇಶ ಜರುಗಲಿದೆ. ನಂತರ ಬೆಳಿಗ್ಗೆ 10.30ಕ್ಕೆ 'ಮಾಧ್ಯಮ ಮತ್ತು ಸರ್ಕಾರ' ಹಾಗೂ ಬೆಳಿಗ್ಗೆ 11.30ಕ್ಕೆ 'ಸಾಮಾಜಿಕ ಮಾಧ್ಯಮ – ವೃತ್ತಿ ವಿಶ್ವಾಸಾರ್ಹತೆ' ವಿಷಯಗಳ ಕುರಿತ ಗೋಷ್ಠಿಗಳನ್ನು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್, ನಾಡಿನ ಹಿರಿಯ ಪತ್ರಕರ್ತ ಎಸ್.ಕೆ. ಶೇಷಚಂದ್ರಿಕಾ ಉದ್ಘಾಟಿಸಲಿದ್ದಾರೆ. ನಾಡಿನ ಹಿರಿಯ ಪತ್ರಕರ್ತರು ಗೋಷ್ಠಿಗಳನ್ನು ನಡೆಸಿಕೊಡುವರು.

ಸಮಾರೋಪ : ಗೋಷ್ಠಿಗಳ ನಂತರ ಮಧ್ಯಾಹ್ನ 2 ಗಂಟೆಗೆ ಜರುಗಲಿರುವ ಸಮಾರೋಪ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಮಾರೋಪದ ನುಡಿಗಳನ್ನಾಡುವರು. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಲೋಕಸಭಾ ಸದಸ್ಯ ಜಿ.ಎಂ. ಸಿದ್ದೇಶ್ವರ, ಕಾರ್ಮಿಕ ಸಚಿವ ಸಂತೋಷ್ ಲಾಡ್, ಮಹಿಳಾ–ಮಕ್ಕಳ ಕಲ್ಯಾಣ ಸಚಿವರಾದ ಶ್ರೀಮತಿ ಲಕ್ಷ್ಮೀ ಹೆಬ್ಬಾಳ್‌ಕರ್, ಅರಣ್ಯ – ಪರಿಸರ ಸಚಿವ ಈಶ್ವರ ಖಂಡ್ರೆ ಅವರುಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜಿಲ್ಲೆಯ ಶಾಸಕರುಗಳು ವಿಶೇಷ ಆಹ್ವಾನಿತರಾಗಿದ್ದಾರೆ.

ಗೌರವಾರ್ಪಣೆ : ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸಿರುವ–ಸಲ್ಲಿಸುತ್ತಿರುವ ದಾವಣಗೆರೆ ಜಿಲ್ಲೆಯ 60 ವರ್ಷ ಮೇಲ್ಪಟ್ಟ ಎಲ್ಲಾ ಹಿರಿಯ ಪತ್ರಕರ್ತರನ್ನು ಸನ್ಮಾನಿಸಿ, ಗೌರವಿಸಲಾಗುತ್ತದೆ. ಅಲ್ಲದೇ, ರಾಜ್ಯ ಪತ್ರಕರ್ತರ ಸಮ್ಮೇಳನದ ಸಂದರ್ಭದಲ್ಲಿ ಪ್ರತಿ ವರ್ಷ ನಾಡಿನ ಹಿರಿಯ ಪತ್ರಕರ್ತರಿಗೆ ಕೊಡಮಾಡುವ ಕೆಯುಡಬ್ಲ್ಯುಜೆ ರಾಜ್ಯ ಪ್ರಶಸ್ತಿಯನ್ನು ದಾವಣಗೆರೆ ಜಿಲ್ಲೆಯ 6 ಜನರಿಗೆ ನೀಡಲು ತೀರ್ಮಾನಿಸಲಾಗಿದೆ ಎಂದು ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ವಿವರಿಸಿದರು.

ಒಂದಾಗಿ ಆತಿಥ್ಯ ನೀಡೋಣ : ದಾವಣಗೆರೆ ಜಿಲ್ಲೆ ಅತಿಥಿಗಳಿಗೆ ಆತಿಥ್ಯ ನೀಡುವಲ್ಲಿ ಮೇಲುಗೈ ಸಾಧಿಸುತ್ತಾ ಬಂದಿದೆ. ಅಂತೆಯೇ ದಾವಣಗೆರೆಯಲ್ಲಿ ನಡೆಯುವ ಪತ್ರಕರ್ತರ ಸಮ್ಮೇಳನಕ್ಕೆ ಬರುವ ರಾಜ್ಯದ ಪತ್ರಕರ್ತರಿಗೆ ಜಿಲ್ಲೆಯ ಎಲ್ಲಾ ಪತ್ರಕರ್ತರು ಒಂದಾಗಿ ಯಾವುದೇ ಕೊರತೆ ಕಾಣದಂತೆ ಆತಿಥ್ಯ ನೀಡೋಣ. ಜೊತೆಗೆ ಅರ್ಥಪೂರ್ಣ, ಯಶಸ್ವಿ ಸಮ್ಮೇಳನವಾಗಿಸಲು ಕಾರಣಿಭೂತರಾಗೋಣ ಎಂದು ಕರೆ ನೀಡಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಮಂಜುನಾಥ್ ಏಕಬೋಟೆ, ಪ್ರಧಾನ ಕಾರ್ಯದರ್ಶಿ ಎ. ಫಕ್ರುದ್ದೀನ್, ಖಜಾಂಚಿ ಎನ್.ವಿ. ಬದರಿನಾಥ್, ಕಾರ್ಯದರ್ಶಿ ಜೆ.ಎಸ್. ವೀರೇಶ್, ರಾಜ್ಯ ಸಮಿತಿ ಸದಸ್ಯ ಕೆ. ಚಂದ್ರಪ್ಪ, ರಾಷ್ಟ್ರೀಯ ಸಮಿತಿ ಸದಸ್ಯ ಎಸ್.ಕೆ. ಒಡೆಯರ್, ಜಿಲ್ಲಾ ವರದಿಗಾರರ ಕೂಟದ ಅಧ್ಯಕ್ಷ ಕೆ. ಏಕಾಂತಪ್ಪ, ಹಿರಿಯ ಪತ್ರಕರ್ತರಾದ ಎಚ್.ಬಿ. ಮಂಜುನಾಥ್, ಬಾ.ಮ.ಬಸವರಾಜಯ್ಯ, ಬಿ.ಎನ್. ಮಲ್ಲೇಶ್, ಸಂಯುಕ್ತ ಕರ್ನಾಟಕ ಸ್ಥಾನಿಕ ಸಂಪಾದಕ ಮಂಜುನಾಥ್ ಗೌರಕ್ಕಳವರ, ವಿಜಯ ಕರ್ನಾಟಕ ಸ್ಥಾನಿಕ ಸಂಪಾದಕ ಸದಾನಂದ ಹೆಗಡೆ, ಮಂಜು ಯಳನಾಡು, ಬಸವರಾಜ ದೊಡ್ಡಮನಿ, ರಮೇಶ್ ಜಾಗೀರ್ ದಾರ್ ಸೇರಿದಂತೆ ಸಮ್ಮೇಳನದ ವಿವಿಧ ಸಮಿತಿಗಳ ಪ್ರಮುಖರು, ಪದಾಧಿಕಾರಿಗಳು, ಪತ್ರಕರ್ತರು ಪಾಲ್ಗೊಂಡಿದ್ದರು.

# ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಹಾತ್ಮಗಾಂಧಿ ಹುತಾತ್ಮರಾದ ದಿನಾಚರಣೆ

» ಚಿತ್ರದುರ್ಗ

ಸತ್ಯ ಮತ್ತು ಅಹಿಂಸೆಯ ಮೂಲಕ ಬ್ರಿಟೀಷರ ವಿರುದ್ದ ಹೋರಾಡಿ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟ ರಾಷ್ಟ್ರಪಿತ ಮಹಾತ್ಮಗಾಂಧಿಯನ್ನು ಕೊಂದ ವ್ಯಕ್ತಿಯನ್ನು ಕೋಮುವಾದಿ ಬಿಜೆಪಿ.ಯವರು ಪೂಜಿಸಲು ಹೊರಟಿರುವುದು ಅತ್ಯಂತ ಹೇಯ ಕೃತ್ಯ. ಪ್ರಜ್ಞಾವಂತರೆಲ್ಲಾ ಚಿಂತಿಸಬೇಕಿದೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಹೇಳಿದರು.

ಮಹಾತ್ಮಗಾಂಧಿ ಹುತಾತ್ಮರಾದ ದಿನಾಚರಣೆಪ್ರಯುಕ್ತಜಿಲ್ಲಾಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಗಾಂಧಿ ಫೋಟೋಗೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.ಮಹಾತ್ಮಗಾಂಧಿ ಹುತಾತ್ಮರಾದ ದಿನವನ್ನು ಕರಾಳ ದಿನವನ್ನಾಗಿ ಆಚರಿಸಲಾಗುತ್ತಿದೆ. ಗಾಂಧಿ ಹತ್ಯೆಯಾದ ದಿನದಿಂದ ಇಂದಿನವರೆಗೂ ಕಾಂಗ್ರೆಸ್ ಗಾಂಧಿಜಿ ವಿಚಾರಗಳನ್ನು ಪಾಲಿಸಿಕೊಂಡು ಬರುತ್ತಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ಅನೇಕ ನಾಯಕರುಗಳ ತ್ಯಾಗ ಬಲಿದಾನವಿದೆ. ಬ್ರಿಟೀಷರ ಪರವಾಗಿದ್ದ ಶಕ್ತಿಗಳು ಸ್ವಾತಂತ್ರ್ಯ ಪೂರ್ವದಿಂದಲೂ ಗಾಂಧಿ ವಿಚಾರಗಳನ್ನುವಿರೋಧಿಸಿಕೊಂಡು ಬರುತ್ತಿವೆಯಲ್ಲದೆ ಗಾಂಧಿಯನ್ನು ಗುಂಡಿಕ್ಕಿ ಹತ್ಯೆಗೈದ ವ್ಯಕ್ತಿಯ ಪ್ರತಿಮೆ ಸ್ಥಾಪಿಸಲು ಮುಂದಾಗಿರುವುದನ್ನು ಎಲ್ಲರೂ ಬಲವಾಗಿ ವಿರೋಧಿಸಬೇಕು. ನೆಹರುರವರ ಕುಡಿ ರಾಹುಲ್‌ಗಾಂಧಿ ಭಾರತ್ ಜೋಡೋ ಯಾತ್ರೆ ಮೂಲಕ ದೇಶದ ಬಡಜನರ, ರೈತರ, ಕಾರ್ಮಿಕರ, ವಿದ್ಯಾರ್ಥಿಗಳ ಸಮಸ್ಯೆಯನ್ನು ಆಲಿಸಿದ್ದಾರೆ. ಈಗ ನ್ಯಾಯಯಾತ್ರೆ ಮೂಲಕ ಐಕ್ಯತೆ, ಶಾಂತಿ, ಸೌಹಾರ್ಧತೆ, ಸಹಬಾಳ್ವೆಯನ್ನು ಬೆಸೆಯಲು ಹೊರಟಿರುವುದನ್ನು ಬಿಜೆಪಿ.ಯವರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ ಎಂದರು. ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್. ಮೈಲಾರಪ್ಪ, ಉಪಾಧ್ಯಕ್ಷ ಎಸ್.ಎನ್.ರವಿಕುಮಾರ್, ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್, ಕಿಸಾನ್‌ಸೆಲ್ ವಿಭಾಗದ ಉಪಾಧ್ಯಕ್ಷ ಶಿವಲಿಂಗಪ್ಪ, ಪದವೀಧರ ವಿಭಾಗದ ಅಧ್ಯಕ್ಷ ಮುದಸಿರ್ ನವಾಜ್ ಇನ್ನು ಮೊದಲಾದವರು ಈ ಸಂದರ್ಭದಲ್ಲಿದ್ದರು.




### ಓಬವ್ವ ವೃತ್ತದಲ್ಲಿ ಸೌಹಾರ್ಧ ಸಮಾವೇಶ



» ಚಿತ್ರದುರ್ಗ

ಶಾಂತಿಯ ಸಂದೇಶ ಸಾರಿದ ರಾಷ್ಟ್ರಪಿತ ಮಹಾತ್ಮಗಾಂಧಿಯನ್ನು ಗುಂಡಿಕ್ಕಿ ಕೊಂದ ವ್ಯಕ್ತಿಯ ಗುಡಿ ಕಟ್ಟುವ ಹುನ್ನಾರ ನಡೆಯುತ್ತಿರುವುದು ಅಪಾಯಕಾರಿ ಎಂದು ಚಿಂತಕ ಜೆ.ಯಾದವರೆಡ್ಡಿ ವಿಷಾಧಿಸಿದರು. ಜಿಲ್ಲೆಯ ವಿವಿಧ ಸಂಘಟನೆಗಳು ಸೇರಿಕೊಂಡು ನಗರದ ಒನಕೆ ಓಬವ್ವ ವೃತ್ತದಲ್ಲಿ ಮಂಗಳವಾರ ಆಚರಿಸಿದ ಸೌಹಾರ್ಧ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದರು.ಜಾಗತೀಕವಾಗಿ ಭಾರತ ಬಹುತ್ವಕ್ಕೆ ಹೆಸರಾಗಿದೆ. ವೈವಿದ್ಯಮಯ ಸಂಸ್ಕೃತಿ ನಮ್ಮದು, ಎಲ್ಲಾ ಜಾತಿ, ಧರ್ಮದವರು ಸಮಾನವಾಗಿ ಬದುಕಲು ಸಂವಿಧಾನ ರಕ್ಷಣೆ ನೀಡಿದೆ. ಬಹುತ್ವವನ್ನು ವಿರೋಧಿಸಿದರೆ ಸಂವಿಧಾನವನ್ನು ವಿರೋಧಿಸಿದಂತೆ. ಆದರೆ ಕೆಲವು ಶಕ್ತಿಗಳು ಭಾರತದಲ್ಲಿ ಏಕ ಸಂಸ್ಕೃತಿ, ಏಕ ಭಾಷೆ, ಏಕ ಧರ್ಮ ತರಲು ಹೊರಟಿದೆ. ಇದರಿಂದ ವೈವಿದ್ಯಮಯ ಸಂಸ್ಕೃತಿ ನಾಶವಾಗಿ ಸಂಘರ್ಷಕ್ಕೆ ಎಡೆಮಾಡಿಕೊಟ್ಟಂತಾಗುತ್ತದೆ. ಸಹಿಷ್ಣುತೆ, ಸಹ ಬಾಳ್ವೆಯಿಂದ ಎಲ್ಲರೂ ಬದುಕಬೇಕು. ರಾಜ್ಯದಲ್ಲಿ ಬರಗಾಲ ತಲೆದೋರಿದ್ದು, ರೈತರು ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಧರ್ಮದ ಅಮಲನ್ನು ತಲೆಗೇರಿಸಿಕೊಂಡಿರುವ ಕೋಮುವಾದಿ ಬಿಜೆಪಿ ಯವರು ಮಂಡ್ಯ ಜಿಲ್ಲೆ ಕೆರಗೋಡಿನಲ್ಲಿ ಹನುಮ ಧ್ವಜವನ್ನು ಇಳಿಸಿದ್ದಾರೆ ನ್ನುವುದನ್ನೇ ದೊಡ್ಡ ರಾದ್ಧಾಂತವನ್ನಾಗಿ ಮಾಡಿ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಹೊರಟಿರುವುದು ಎಷ್ಟರ ಮಟ್ಟಿಗೆ ಸರಿ ಎಂದರು. ಸಿ.ಐ.ಟಿ.ಯು. ಜಿಲ್ಲಾ ಸಹ ಸಂಚಾಲಕ ಸಿ.ಕೆ.ಗೌಸ್‌ಪೀರ್, ಕರ್ನಾಟಕ ಜನಶಕ್ತಿಯ ಟಿ.ಶಫಿವುಲ್ಲಾ ಸೇರಿದಂತೆ ವಿವಿಧ ಸಂಘಟನೆಗಳು ಸೌಹಾರ್ಧ ಸಮಾವೇಶದಲ್ಲಿ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಅಂತರ್ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಾಣೆಹಳ್ಳಿ ಸಜ್ಜು

» ಮೊದಲ ಪುಟದಿಂದ

ಪುನಹ ಎರಡು ಜಿಲ್ಲೆಯ ಸಾಹಿತ್ಯ ಪ್ರೇಮಿಗಳ ಒತ್ತಾಸೆಯ ಮೇರೆಗೆ ಈ ಜವಾಬ್ದಾರಿಯನ್ನ ಹೊತ್ತುಕೊಂಡರು.

ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷರು ಹಾಗೂ ಖ್ಯಾತ ಸಾಹಿತಿಗಳಾದ ಶ್ರೀ ಗೋರು ಚೆನ್ನಬಸಪ್ಪ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ರಾಜ್ಯ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಡೋಜ ಡಾ. ಮಹೇಶ್ ಜೋಶಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವರು.

ಸ್ಮರಣ ಸಂಚಿಕೆ ಬೆಳಕಿನೆಡೆಗೆ ಈ ಕೃತಿಯನ್ನ ಲೋಕಾರ್ಪಣೆ ಮಾಡಲಿದ್ದಾರೆ ಯೋಜನೆ ಮತ್ತು ಸಾಂಕೀಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ ಸುಧಾಕರ್ ರವರು. ಹೊಸದುರ್ಗ ಶಾಸಕ ಬಿ ಜಿ ಗೋವಿಂದಪ್ಪನವರು ಸಮ್ಮೇಳನ ಅಧ್ಯಕ್ಷರ ಭಾಷಣ ಪತಿಯನ್ನು ಲೋಕಾರ್ಪಣೆಗೊಳಿಸುವರು.

ಚಿತ್ರದುರ್ಗದ ಇತಿಹಾಸವನ್ನು ಜಗತ್ತಿಗೆ ಪರಿಚಯಿಸಿದ ಸಂಶೋಧಕ ಲೇಖಕ ಲಕ್ಷ್ಮಣ್ ತೆಲಗಾವಿ, ಮಾದರ ಚೆನ್ನಯ್ಯ ಗುರುಪೀಠದ ಶ್ರೀ ಮಾದರ ಚೆನ್ನಯ್ಯ ಸ್ವಾಮೀಜಿ, ಭಗೀರಥ ಬೆಟ್ಟದ ಶ್ರೀ ಪುರುಷೋತ್ತಮಾನಂದ ಪುರಿ ಸ್ವಾಮೀಜಿ, ಕುಂಚಟಿಗ ಪೀಠದ ಶ್ರೀ ಶಾಂತವೀರ ಮಹಾಸ್ವಾಮಿಗಳು ಚಿಕ್ಕಮಗಳೂರಿನ ಶ್ರೀ ಬಸವ ಮರುಳಸಿದ್ದ ಶ್ರೀಗಳು, ಕನಕ ಗುರು ಪೀಠ ಕೆಲ್ಲೋಡು ಶಾಖ ಮಠದ ಶ್ರೀ ಈಶ್ವರಂದಪುರಿ ಸ್ವಾಮೀಜಿಗಳು, ಈ ಬಾರಿಯ0 ಅಂತರ್ ಜಿಲ್ಲಾ ಸಾಹಿತ್ಯ ಸಮ್ಮೇಳನದ ದಿವ್ಯ ಚೇತನಗಳಾಗಿ ಸಮ್ಮೇಳನಕ್ಕೆ ಮೆರುಗು ನೀಡಲಿದ್ದಾರೆ.



ಕರ್ನಾಟಕ ರಾಜ್ಯದ ನಿಕಟ ಪೂರ್ವ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಹಲೋ ಕೇಂದ್ರ ಸಚಿವರು ಹಾಗೂ ಚಿತ್ರದುರ್ಗ ಸಂಸದರಾದ ಎ,ನಾರಾಯಣಸ್ವಾಮಿ, ಅವರು ಸಮಾರೋಪ ಸಮಾರಂಭದಲ್ಲಿ ಭಾಗವಹಿಸುವರು. ನಾಡಿನ ಜನತೆಗೆ ಸಾಣೆ ಹಳ್ಳಿಯ ಶ್ರೀಗುರುಪೀಠದ ಶ್ರೀಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಗಳು ಅಧ್ಯಕ್ಷೀಯ ಆಶೀರ್ವಚನವನ್ನ ನುಡಿಯಲಿದ್ದಾರೆ.

**'ಕನ್ನಡ ನಾಡಿನ ಸಾಹಿತ್ಯ ಪರಂಪರೆಯ ರಂಗ ಸಂತ ಪಂಡಿತಾರಾಧ್ಯ ಶ್ರೀಗಳು:** ಪಂಡಿತಾರಾಧ್ಯ ಶ್ರೀಗಳು ರಂಗ ಕೃಷಿಯಷ್ಟೇ ಸಾಹಿತ್ಯ ಕೃಷಿಯನ್ನೂ ಬಲ್ಲವರು, ಬಸವಾದಿ ಶರಣರ ವಿಚಾರಗಳ ಬಗ್ಗೆ ಶ್ರೀಗಳಿಗೆ ಅಪಾರವಾದ ನಂಬಿಕೆ, ಒಮ್ಮೆ ಶ್ರೀಗಳು ವ್ಯಾಸಂಗ ಮಾಡುತ್ತಿರುವಾಗ ಅವರ ಪ್ರಾಧ್ಯಾಪಕರು ನಿಮ್ಮ ಮುಂದಿನ ಗುರಿ ಏನೆಂದು ಕೇಳಿದಾಗ ಬಸವಾದಿ ಶರಣರ ವಿಚಾರಗಳನ್ನ ಬಿತ್ತಿ ಅದರಿಂದ ಹುಲಸಾದ ಫಸಲನ್ನು ತೆಗೆದು ಸರ್ವ ಜನಾಂಗಕ್ಕೂ ಆ ವಿಚಾರಗಳನ್ನು ತಿಳಿಸುವುದೇ ನನ್ನ ಮುಂದಿನ ಗುರಿ ಎಂದರಂತೆ,

ಚಿತ್ರದುರ್ಗ ಜಿಲ್ಲಾ ಕಸಾಪ ಅಧ್ಯಕ್ಷ ಶಿವಸ್ವಾಮಿ ಮತ್ತು ಚಿಕ್ಕಮಗಳೂರು ಜಿಲ್ಲಾ ಕಸಾಪ ಅಧ್ಯಕ್ಷ ಸೂರಿ ಶ್ರೀನಿವಾಸ್, ರವರು ಅವಳಿ ಜಿಲ್ಲೆಯ ಎಲ್ಲಾ ಸಾಹಿತ್ಯಾಸಕ್ತರ ಇಚ್ಛೆಯಂತೆ ಗ್ರೀಕ್ ಮಾದರಿಯ ರಂಗಸಜ್ಜಿಕೆ, ಮತ್ತು ಶಾಮನೂರು ಶಿವಶಂಕರಪ್ಪ ಒಳಾಂಗಣದಲ್ಲಿ ಈ ಯಶಸ್ವಿ ಕಾರ್ಯಕ್ರಮಕ್ಕೆ ಚಾಲನೆ ನೀಡಲು ಸಜ್ಜಾಗಿದ್ದಾರೆ.

**ಶ್ರೀಗಳು ಕನ್ನಡ ಸಾರಸ್ವತಾ ಲೋಕಕ್ಕೆ ನೀಡಿದ ಕೃತಿಗಳು:** ಶ್ರೀಗಳು ದಿನದ ಹೆಚ್ಚಿನ ಸಮಯವನ್ನು ಅಧ್ಯಯನಕ್ಕೆ ಮುಡಿಪುಡುತ್ತಾರೆ. ತನ್ನ ಮೊನಚಾದ ಬರವಣಿಗೆಯಿಂದ ಹೊರಬಂದ ಬಸವಾಧೀಶ ಶರಣರ ಜೀವನ ಆದರ್ಶ ಮತ್ತು ಅವರ ಬದುಕು ಕುರಿತಾದ ಹೆಚ್ಚು ಕೃತಿಗಳು ಹೊರ ಬಂದಿದ್ದು ಅವುಗಳಲ್ಲಿ ಜೀವನ ದರ್ಶನ,ಕೈದಿವಿಗೆ,ಬದುಕು, ನಡೆ–ನುಡಿ ಸಿದ್ಧಾಂತ ವಚನಕಾರನ ಬದ್ಧತೆ, ನಾಟಕಗಳಾದ ಅಂತರಂಗ ಬಹಿರಂಗ ಸ್ವಾಮಿ ವಿವೇಕಾನಂದ ಜಂಗಮ ಜಡಗಿ ಅಂಕುಶ ಮೌಳಿಗೆ ಮಾರಯ್ಯ, ಗುರುಮಾತೆ ಅಕ್ಕ ನಾಗಲಾಂಬಿಕೆ, ಈ ನಾಟಕಗಳನ್ನು ಶ್ರೀಗಳು ರಚಿಸಿದ್ದಾರೆ.

ನೂರಾರು ಕೃತಿಗಳು, ಹತ್ತಾರು ನಾಟಕಗಳು, ಮತ್ತೆ ಕಲ್ಯಾಣದ ಮೂಲಕ ಬಸವಣ್ಣನವರ ಆಶಯಗಳನ್ನು ಜನಸಾಮಾನ್ಯರಿಗೆ ಮುಟ್ಟಿಸುವ ಕಾಯಕ ಮಾಡಿದ್ದಾರೆ.

ಶ್ರೀಗಳು ಯಾವುದೇ ಪ್ರಶಸ್ತಿಗಳ ಹಿಂದೆ ಜ್ಯೋತಿ ಬಿದ್ದವರಲ್ಲ ತನ್ನೊಮ್ಮೆ ಹುಡುಕಿಕೊಂಡು ಬಂದ ಹತ್ತಾರು ಪ್ರಶಸ್ತಿಗಳನ್ನು ಸ್ವೀಕರಿಸದೆ ನೈಜತೆ ಮೆರೆದವರು.

ಕನ್ನಡ ರಾಜ್ಯೋತ್ಸವ ಪ್ರಶಸ್ತಿ, ಹಾಗೂ 17ಕ್ಕೂ ಹೆಚ್ಚು ಪ್ರಶಸ್ತಿಗಳು ಶ್ರೀಗಳ ನೈಜ ಬದುಕಿಗೆ ಲಭಿಸಿವೆ.

## ಫಾಸ್ಟ್ ನ್ಯೂಸ್

### 2 ಹೆಕ್ಟೇರ್‌ವರೆಗೂ ಸ್ಪ್ರಿಂಕ್ಲರ್ ಸೆಟ್ ಸೌಲಭ್ಯ ವಿಸ್ತರಣೆ

» ಚಿತ್ರದುರ್ಗ

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಹಾಗೂ ಅಟಲ್ ಭೂಜಲ್ ಯೋಜನೆಯ ಸೂಕ್ಷ್ಮ ನೀರಾವರಿ ಕಾರ್ಯಕ್ರಮದಡಿ 2023-24ನೇ ಸಾಲಿಗೆ ಅರ್ಹ ರೈತ ಫಲಾನುಭವಿಗಳಿಗೆ ಈವರೆಗೆ 1 ಹೆಕ್ಟೇರ್‌ವರೆಗೆ ಸ್ಪ್ರಿಂಕ್ಲರ್ ಸೆಟ್ ಸೌಲಭ್ಯವನ್ನು ನೀಡಲಾಗಿದ್ದು, ಯೋಜನೆಯ ಮಾರ್ಗಸೂಚಿ ಅನ್ವಯ 2 ಹೆಕ್ಟೇರ್‌ವರೆಗೂ ಸ್ಪ್ರಿಂಕ್ಲರ್ ಸೆಟ್ ಸೌಲಭ್ಯ ವಿಸ್ತರಣೆ ಮಾಡಲಾಗಿದೆ.

ಈಗಾಗಲೇ 1 ಹೆಕ್ಟೇರ್‌ವರೆಗೆ ಸ್ಪ್ರಿಂಕ್ಲರ್ ಸೆಟ್ ಸೌಲಭ್ಯ ಪಡೆದ ಅರ್ಹ ರೈತ ಫಲಾನುಭವಿಗಳು ಹೆಚ್ಚುವರಿಯಾಗಿ ಇನ್ನೂ 1 ಹೆಕ್ಟೇರ್‌ವರೆಗೂ ಸ್ಪ್ರಿಂಕ್ಲರ್ ಸೆಟ್ ಸೌಲಭ್ಯವನ್ನು ಪಡೆಯಲು ಅವಕಾಶವಿರುತ್ತದೆ. ಆದ್ದರಿಂದ ಅರ್ಹ ರೈತ ಫಲಾನುಭವಿಗಳು ಈ ಅವಕಾಶ ಸದುಪಯೋಗ 'ಪಡಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಫೆ.1ರಂದು ತರಬೇತಿ ಕಾರ್ಯಾಗಾರ

» ಚಿತ್ರದುರ್ಗ

ಜಿಲ್ಲಾಕಾನೂನುಸೇವೆಗಳಪ್ರಾಧಿಕಾರ,ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಯಡಿ ಜಿಲ್ಲಾಮಟ್ಟ ಹಾಗೂ ತಾಲ್ಲೂಕುಮಟ್ಟದ ಅಧಿಕಾರಿಗಳಿಗೆ ಬಾಲ್ಯವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಹಾಗೂ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013ರ ಕಾಯ್ದೆ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಫೆ.1ರಂದು ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಕೆ.ಬಿ.ಗೀತಾ ಉದ್ಘಾಟನೆ ನೆರವೇರಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಘನಉಪಸ್ಥಿತಿವಹಿಸುವರು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂಧರ್ ಕುಮಾರ್ ಮೀನಾ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ, ಡಿಹೆಚ್‌ಓ ಡಾ.ಜಿ.ಪಿ.ರೇಣುಪ್ರಸಾದ್, ಡಿಡಿಪಿಐ ಕೆ.ರವಿಶಂಕರ್ ರೆಡ್ಡಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆ ಕಾಯ್ದೆ ಕುರಿತು ಮಕ್ಕಳ ಕಲ್ಯಾಣ ಸಮಿತಿ ಸದಸ್ಯೆ ಡಿ.ಕೆ.ಶೀಲಾ ಹಾಗೂ ಬಾಲ್ಯವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಕುರಿತು ಕೊಪ್ಪಳ ಜಿಲ್ಲಾಧಿಕಾರಿ ಕಚೇರಿಯ ಯುನಿಸೆಫ್ ಮಕ್ಕಳ ಸಂರಕ್ಷಣಾ ಯೋಜನೆ ಪ್ರಾದೇಶಿಕ ಸಂಯೋಜಕ ಡಾ.ಕೆ.ರಾಘವೇಂದ್ರ ಭಟ್ ಉಪನ್ಯಾಸ ನೀಡುವರು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ತಿಳಿಸಿದ್ದಾರೆ.

### ಸಾರ್ವಜನಿಕರ ಸಮಸ್ಯೆಗೆ ಶಾಸಕ ಬಸವರಾಜು ವಿ ಶಿವಗಂಗಾ ಸ್ಪಂದನೆ

» ಚನ್ನಗಿರಿ

ಕ್ಷೇತ್ರದ ಜನರ ಸಮಸ್ಯೆ ಯಾವುದೇ ಇರಲಿ ಅದನ್ನು ಬಗೆಹರಿಸಲಾಗುವುದು ಎಂದು ಶಾಸಕ ಬಸವರಾಜು ವಿ ಶಿವಗಂಗಾ ತಿಳಿಸಿದರು. ಬೊಮ್ಮೇನಹಳ್ಳಿಯಲ್ಲಿ ನಡೆದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿದ ಅವರು ಜನರ ಸಮಸ್ಯೆಗಳನ್ನ ತಿಳಿಯಲೆಂದೇ ಈ ಜನತಾ ದರ್ಶನ ಕಾರ್ಯಕ್ರ ಹಮ್ಮಿಕೊಳ್ಳಲಾಗಿದೆ.ನಿಮ್ಮ ಮನೆ ಬಾಗಿಲಿಗೆ ಬಂದು ನಿಮ್ಮ ಸಮಸ್ಯೆಗಳಿಗೆ ಪರಿಹಾರ ನಿಡಲಾಗುವುದು ಎಂದು ಶಾಸಕ ಬಸವರಾಜು ವಿ ಶಿವಗಂಗಾ ತಿಳಿಸಿದರು. ಸ್ಥಳೀಯ ಸಮಸ್ಯೆಗಳಿಗೆ ಪರಿಹಾರ ನಿಡುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಯಾವ ಸಮಸ್ಯೆ ಇದ್ದರೂ ಅದನ್ನ ನನ್ನ ಗಮನಕ್ಕೆ ತನ್ನಿ ಎಂದರು. ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದೆ, ಕೊಟ್ಟ ಐದು ಗ್ಯಾರಂಟಿಗಳನ್ನ ಜಾರಿಗೆ ತರಲಾಗಿದೆ. ಕಾಂಗ್ರೆಸ್ ಸರ್ಕಾರ ಬಡವರ ಪರವಾಗಿದೆ, ನಿಮ್ಮ ಗ್ರಾಮದ ಸಮಸ್ಯೆಗಳು ಏನೇ ಇದ್ದರು ಅದನ್ನ ಪರಿಹರಿಸುತ್ತೇವೆ. ಸ್ಥಳೀಯ ಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹರಿಸಲು ಈ ಕಾರ್ಯಕ್ರಮವನ್ನ ಸರ್ಕಾರ ಜಾರಿಗೆ ತಂದಿದೆ. ತಾಲ್ಲೂಕು ಸಮಗ್ರ ಅಭಿವೃದ್ಧಿಯೇ ನಮ್ಮ ಸಂಕಲ್ಪ ಎಂದರು. ನಂತರ ನುಗ್ಗಿಹಳ್ಳಿ ನಿತಿಗೆರೆ ಯರಗಟ್ಟಿಹಳ್ಳಿ, ಹಿರೇಗಂಗೂರು, ಚಿಕ್ಕಗಂಗೂರು ಲಕ್ಷ್ಮಿ ಸಾಘರ ಮತ್ತು ಕೊರಟಿಕೆರೆ ಸೇರಿದಂತೆ ಹಲವು ಗ್ರಾಮಗಳಿಗೆ ತೆರಳಿದ ಶಾಸಕ ಬಸವರಾಜು ವಿ ಶಿವಗಂಗಾ ಸರ್ಕಾರದ ಯೋಜನೆಗಳನ್ನು ಫಲಾನುಭವಿಗಳಿಗೆ ಅರ್ಪಿಸಿದರು. ಈ ವೇಳೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು

# ನಗರಕ್ಕೆ ಇಂದು ಬ್ರಹ್ಮಕುಮಾರಿ ಶಿವಾನಿ ಆಗಮನ

» ದಾವಣಗೆರೆ

ಸುಖ - ಶಾಂತಿಮಯ ಜೀವನಕ್ಕಾಗಿ ಸಕಾರಾತ್ಮಕ ಚಿಂತನೆ ಮಾಡುವ ಕಲೆ ಕುರಿತಂತೆ ಅಂತರ ರಾಷ್ಟ್ರೀಯ ಮಟ್ಟದಲ್ಲಿ ಉಪನ್ಯಾಸ ನೀಡುವಲ್ಲಿ ಹೆಸರಾಗಿರುವ ರಾಜಯೋಗಿನಿ ಬ್ರಹ್ಮಾಕುಮಾರಿ ಶಿವಾನಿ ಅವರು ಫೆ. 1 ರಂದು ನಗರಕ್ಕೆ ಆಗಮಿಸಲಿದ್ದಾರೆ.

ಅಂದು ಸಂಜೆ 5.30ರಿಂದ ರಾತ್ರಿ 8.00ರವರೆಗೆ ಎಸ್.ಎಸ್. ಬಡಾವಣೆ 'ಎ' ಬ್ಲಾಕ್‌ನಲ್ಲಿರುವ ಬಾಪೂಜಿ ಎಂಬಿಎ ಕಾಲೇಜು ಮೈದಾನದಲ್ಲಿ ಏರ್ಪಾಡಾಗಿರುವ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಶಿವಾನಿ ಅವರು ನಡೆಸಿಕೊಡಲಿದ್ದಾರೆ.

ಅಂತರ ರಾಷ್ಟ್ರೀಯ ಅಧ್ಯಾತ್ಮಿಕ ಸೇವಾ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸ್ಥಳೀಯ ಶಾಖೆ ವತಿಯಿಂದ ಈ ಕಾರ್ಯಕ್ರಮ ಏರ್ಪಾಡಾಗಿದ್ದು, ಸುಮಾರು 5 ಸಾವಿರಕ್ಕೂ ಹೆಚ್ಚು ಜನರು ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದು ಬ್ರಹ್ಮಾಕುಮಾರಿ ಸಂಸ್ಥೆಯ ಸ್ಥಳೀಯ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಾಕುಮಾರಿ ಲೀಲಾಜಿ ತಿಳಿಸಿದ್ದಾರೆ.

ಇಂದಿಲ್ಲಿಪತ್ರಿಕಾಗೋಷ್ಠಿಯಲ್ಲಿಈವಿಷಯ ತಿಳಿಸಿದ ಅವರು, ಬ್ರಹ್ಮಾಕುಮಾರೀಸ್ ಸಂಸ್ಥೆಯ ಹುಬ್ಬಳ್ಳಿವಲಯ ನಿರ್ದೇಶಕರಾದ ರಾಜಯೋಗಿ ಬ್ರಹ್ಮಾಕುಮಾರ ಡಾ. ಬಸವರಾಜ ರಾಜಋಷಿ ಅವರ ಸಾನ್ನಿಧ್ಯ, ಬ್ರಹ್ಮಾಕುಮಾರೀಸ್ ಸಂಸ್ಥೆಯ ಹುಬ್ಬಳ್ಳಿ ವಲಯ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಾಕುಮಾರಿ ನಿರ್ಮಲಾಜಿ ಅಧ್ಯಕ್ಷತೆಯಲ್ಲಿ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಶಾಮನೂರು ಮಲ್ಲಿಕಾರ್ಜುನ್, ಶಾಸಕರುಗಳಾದ ಬಿ.ಪಿ. ಹರೀಶ್, ಕೆ.ಎಸ್. ಬಸವಂತಪ್ಪ, ಬಸವರಾಜ ಶಿವಗಂಗಾ, ಜಿಲ್ಲಾಧಿಕಾರಿ ಡಾ. ಎಂ.ವಿ. ವೆಂಕಟೇಶ್, ಪೂರ್ವ ವಲಯ ಪೊಲೀಸ್ ಮಹಾನಿರೀಕ್ಷಕ ಡಾ. ಕೆ. ತ್ಯಾಗರಾಜನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಉಮಾ ಪ್ರಶಾಂತ್, ಜಿಲ್ಲಾ



ನ್ಯಾಯಾಧೀಶರಾದ ಶ್ರೀಮತಿ ರಾಜೇಶ್ವರಿ ಎನ್. ಹೆಗಡೆ, ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಸುರೇಶ್ ಇಟ್ನಾಳ್, ಉಪ ವಿಭಾಗಾಧಿಕಾರಿ ಶ್ರೀಮತಿ ಎನ್. ದುರ್ಗಾಶ್ರೀ, ತಹಶೀಲ್ದಾರ್ ಡಾ. ಅಶ್ವತ್ಥ್, ಕೈಗಾರಿಕೋದ್ಯಮಿ ಅಥಣಿ ಎಸ್. ವೀರಣ್ಣ, ಮಹಾನಗರ ಪಾಲಿಕೆ ಮಹಾಪೌರರಾದ ವಿನಾಯಕ ಪೈಲ್ವಾನ್, ದಾವಣಗೆರೆ ವಿವಿ ಉಪ ಕುಲಪತಿ ಡಾ.ಬಿ.ಡಿ. ಕುಂಬಾರ, ಬಾಪೂಜಿ ವಿದ್ಯಾಸಂಸ್ಥೆ ಆಡಳಿತ ಮಂಡಳಿ ಸದಸ್ಯರಾದಡಾ. ಪ್ರಭಾ ಮಲ್ಲಿಕಾರ್ಜುನ್, ಗ್ರಾಸೀಂ ಇಂಡಸ್ಟ್ರೀಸ್ ಹಿರಿಯ ಅಧ್ಯಕ್ಷ ಅಜಯ್ ಗುಪ್ತ ಅವರುಗಳು ಗೌರವಾನ್ವಿತ ಅತಿಥಿಗಳಾಗಿದ್ದಾರೆ.

**ಸಂಕ್ಷಿಪ್ತ ಪರಿಚಯ :** ಮೂಲತಃ ದೆಹಲಿಯವರಾದ ಶಿವಾನಿ ಅವರು, ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಪದವೀಧರರಾಗಿದ್ದು, ಪೂನಾದ ಭಾರತೀಯ ವಿದ್ಯಾಪೀಠದಲ್ಲಿ ಎರಡು ವರ್ಷ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸಿದ್ದಾರೆ.ಬ್ರಹ್ಮಾಕುಮಾರೀಸ್ ಸಂಸ್ಥೆಯಲ್ಲಿ ಅನೇಕ ವರ್ಷಗಳಿಂದ ರಾಜಯೋಗದ ಅಧ್ಯಯನ ಮಾಡುತ್ತಿರುವ ಅವರೀಗ ರಾಜಯೋಗ ಶಿಕ್ಷಕರಾಗಿ ಅಂತರ ರಾಷ್ಟ್ರೀಯ ಮಟ್ಟದಲ್ಲಿ ಉಪನ್ಯಾಸ ನೀಡುತ್ತಿದ್ದಾರೆ.

ಅಧ್ಯಾತ್ಮಿಕ ಮತ್ತು ನೈತಿಕ ಶಿಕ್ಷಣ ಕುರಿತಂತೆ ಕಳೆದ 16 ವರ್ಷಗಳಿಂದ ಭಾರತ ಮತ್ತು ವಿದೇಶಗಳಲ್ಲಿ ಹಲವಾರು ಸಭಾ ಕಾರ್ಯಕ್ರಮ ಮತ್ತು ದೂರದರ್ಶನಗಳಲ್ಲಿ ಉಪನ್ಯಾಸ ನೀಡುತ್ತಿದ್ದಾರೆ. ಅವೇಕ್‌ನಿಂಗ್, ಪೀಸ್ ಆಫ್ ಮೈಂಡ್, ಅಸ್ತಾ ಟಿವಿ, ಝೀ ಟಿವಿ ಸೇರಿದಂತೆ, ಇತರೆ ಟಿವಿಗಳಲ್ಲೂ ಶಿವಾನಿ ಅವರ ಉಪನ್ಯಾಸ ಕಾರ್ಯಕ್ರಮಗಳು ಪ್ರಸಾರವಾಗುತ್ತಲೇ ಇವೆ. ಒತ್ತಡದಲ್ಲಿರುವ ಅನೇಕರಿಗೆ ಸನ್ಮಾರ್ಗ ತೋರುವಂತಹ ವಿಶೇಷ ಉಪನ್ಯಾಸದ ಸೇವೆಯನ್ನು ಶಿವಾನಿ ಅವರು ಮಾಡುತ್ತಿದ್ದಾರೆ. ಅಮೆರಿಕ, ಆಫ್ರಿಕಾ, ಅರಬ್ ಮತ್ತು ಇತರೆ ರಾಷ್ಟ್ರಗಳಿಗೂ ಹೋಗಿ ತಮ್ಮ ಮಹೋನ್ನತ ಸೇವೆ ಸಲ್ಲಿಸುತ್ತಿದ್ದಾರೆ.

ಒತ್ತಡ ಮುಕ್ತ ಜೀವನ ಶೈಲಿ, ನಾಯಕತ್ವ ಕೌಶಲ್ಯಗಳು, ಭಾವನಾತ್ಮಕ ಬುದ್ದಿವಂತಿಕೆ, ಸಕಾರಾತ್ಮಕ ಚಿಂತನಾ ಕಲೆ, ಜೀವನ ಮತ್ತು ಜೀವಂತ ಮೌಲ್ಯಗಳು, ಆಂತರಿಕ ಶಕ್ತಿಗಳನ್ನು ಗುರುತಿಸುವುದು, ಸ್ವ-ನಿರ್ವಹಣೆ, ಸಂಬಂಧಗಳಲ್ಲಿ ಸಾಮರಸ್ಯ, ರಾಜಯೋಗದ ಪ್ರಾಯೋಗಿಕ ವಿಧಾನಗಳು ಇತ್ಯಾದಿ ವಿಷಯಗಳನ್ನು ತುಂಬಾ ಸರಳವಾಗಿ ಜನಮನಕ್ಕೆ ತಲುಪುವಂತೆ ಮತ್ತು ಸಕಾರಾತ್ಮಕ ಬದಲಾವಣೆ ತರುವಲ್ಲಿ ಮನವರಿಕೆ ಮಾಡಿಕೊಡುತ್ತಿದ್ದಾರೆ.

## ಅಭಿವೃದ್ದಿಯ ಸಮತೋಲನಕ್ಕೆ ಕೈಗಾರಿಕೆಗಳ ಸ್ಥಾಪನೆ ಬಹಳ ಮುಖ್ಯ; ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ

» ದಾವಣಗೆರೆ

ಅಭಿವೃದ್ದಿಯ ಸಮತೋಲನ ಕಾಪಾಡಲು ಜಿಲ್ಲಾ ಮಟ್ಟದಲ್ಲಿಯೂ ಕೈಗಾರಿಕೆಗಳ ಸ್ಥಾಪನೆಯಾಗಬೇಕೆಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಮಂಗಳವಾರ ಸಣ್ಣ ಕೈಗಾರಿಕೆಗಳ ಅಭಿವೃದ್ದಿ ಬ್ಯಾಂಕ್ ಆಫ್ ಇಂಡಿಯಾ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕೆನರಾ ಬ್ಯಾಂಕ್ ಮತ್ತು ರಾಜ್ಯ ಸಣ್ಣ ಕೈಗಾರಿಕೆಗಳ ಉದ್ದಿಮೆದಾರರ ಸಂಘ ಇವರ ವತಿಯಿಂದ ದಾವಣಗೆರೆಯಲ್ಲಿ ಹರಿಹರ ರಸ್ತೆಯಲ್ಲಿರುವ ಹೋಟೆಲ್ ಸಾಯಿ ಇಂಟರ್ ನ್ಯಾಷನಲ್‌ನಲ್ಲಿ ಎಂಎಸ್‌ಎಂಇಗಳಿಗೆ ಆರ್ಥಿಕ ಸಾಕ್ಷರತೆ ಮತ್ತು ಉದಯೋನ್ಮುಖ ಅವಕಾಶಗಳ ಕುರಿತು ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕೈಗಾರಿಕೆಗಳು ಒಂದು ದೇಶದ ಅಭಿವೃದ್ಧಿಗೆ ಪ್ರಮುಖ ಪಾತ್ರ ವಹಿಸಿವೆ, ಕೈಗಾರಿಕೋದ್ಯಮ ಬೆಳೆದಂತೆ ಗುಡಿ ಕೈಗಾರಿಕೆಗಳ ಇಳಿಕೆಯಾಯಿತು. ಸ್ವಾತಂತ್ರ್ಯದ ನಂತರ ದೇಶದ ಅನೇಕ ನಗರಗಳಲ್ಲಿ ಕೈಗಾರಿಕೆಗಳ ಸ್ಥಾಪನೆಯಾಯಿತು. ಇಂತಹ ಕೈಗಾರಿಕೆಗಳು ಎಲ್ಲಾ ಜಿಲ್ಲೆಗಳಲ್ಲಿ ಸ್ಥಾಪನೆಯಾಗುವುದರಿಂದ ಅಭಿವೃದ್ದಿಯಲ್ಲಿ ಸಮತೋಲನತೆಯನ್ನು



ಕಾಪಾಡಲು ಸಾಧ್ಯವಾಗಲಿದೆ. ಕೈಗಾರಿಕೋದ್ಯಮ ಬೆಳೆಯಲು ಸ್ಥಳೀಯ ಉದ್ದಿಮೆದಾರರು ಮುಂದೆ ಬರಬೇಕು. ದಾವಣಗೆರೆ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ವಿಪುಲವಾದ ಅವಕಾಶಗಳಿವೆ, ಇಲ್ಲಿ ಮಾನವ ಸಂಪನ್ಮೂಲ, ಕೌಶಲ್ಯತೆ, ಸಮತಟ್ಟಾದ ಭೂಮಿ, ನೀರಿನ ಲಭ್ಯತೆ ಸೇರಿದಂತೆ ಅನೇಕ ಮೂಲಭೂತ ಸೌಕರ್ಯಗಳು ಇಲ್ಲಿವೆ ಎಂದರು. ಸಣ್ಣ ಕೈಗಾರಿಕೆಗಳ ಅಭಿವೃದ್ದಿ ಬ್ಯಾಂಕ್ ಸಹಾಯಕ ವ್ಯವಸ್ಥಾಪಕರಾದ ಎಂ.ಆರ್. ವಿಕಾಸ್. ಮಾತನಾಡಿ ಸಿಡ್ಬಿ 1990 ರಲ್ಲಿ ಐಡಿಬಿಐ ಒಂದು ಸಂಸ್ಥೆಯಾಗಿದೆ. ಈ ಸಿಡ್ಬಿಯಲ್ಲಿ ಸರ್ಕಾರ, ಬ್ಯಾಂಕ್, ಇನ್ಸುರೆನ್ಸ್ ಕಂಪನಿಗಳು ಬಂಡವಾಳ ಹೂಡುತ್ತಿವೆ. ಕೈಗಾರಿಕೆಗಳ ಅಭಿವೃದ್ದಿ, ಪ್ರೋತ್ಸಾಹ, ಹಣಕಾಸು ನೆರವು ಇವು ಕೈಗಾರಿಕೆಗಳ ಅಭಿವೃದ್ದಿ ಬ್ಯಾಂಕ್‌ನ ಕಾರ್ಯಕ್ರಮವಾಗಿದೆ ಎಂದರು.

ಕೆನರಾ ಬ್ಯಾಂಕಿನ ಸಹಾಯಕ ಪ್ರಧಾನ ವ್ಯವಸ್ಥಾಪಕ ವೈ.ವಿ.ಎನ್. ಶಿವಪ್ರಸಾದ್. ಜಿಲ್ಲಾ ಕೈಗಾರಿಕಾ ಇಲಾಖೆ ಜಂಟಿ ನಿರ್ದೇಶಕ ರಾಜೇಂದ್ರ ನಾಮದೇವ್ ಕದಂ, ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕ ಶಿವಲಿಂಗಪ್ಪ ಎನ್. ಕುಂಬಾರ, ಕ್ಯಾಸಿಯಾ ಅಧ್ಯಕ್ಷರಾದ ಸಿವಿ ಶಶಿಧರ್ ಶೆಟ್ಟಿ, ಶೇಷಾಚಲ ಭಾಗವಹಿಸುವರು.

## ಉತ್ತಮ ವಿದ್ಯೆಯಿಂದ ಸಾಧನೆ ಸಾಧ್ಯ: ಡಾ.ಸ್ವಾತಿ ಪ್ರದೀಪ್



» ಹೊಸದುರ್ಗ

ವಿದ್ಯಾರ್ಥಿಗಳು ಬಾಲ್ಯಾವಸ್ಥೆಯಲ್ಲಿ ಏಕಾಗ್ರತೆಯಿಂದ ಯೋಗ, ವ್ಯಾಯಾಮ ಮಾಡಿ ಏಕಾಗ್ರತೆಯಿಂದ ಓದಿದಾಗ ಉತ್ತಮ ವಿದ್ಯೆ ಮೈಗೂಡಿಸಿಕೊಂಡಲ್ಲಿ ಎಂತಹ ಸಾಧನೆಯನ್ನಾದರೂ ಮಾಡಬಹುದು ಎಂದು ಪುರಸಭಾ ಸದಸ್ಯೆ ಡಾಕ್ಟರ್ ಸ್ವಾತಿ ಪ್ರದೀಪ್ ತಿಳಿಸಿದರು.ಪಟ್ಟಣದ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ನಡೆದ ರಾಷ್ಟ್ರೀಯ ಭಾವೈಕ್ಯತೆ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸೂರ್ಯೋದಯಕ್ಕಿಂತ ಮುಂಚಿತವಾಗಿ ಏಳುವ ಹವ್ಯಾಸ ಬೆಳೆಸಿಕೊಳ್ಳಬೇಕು. ಬೆಳಗಿನ ವಾತಾವರಣದಲ್ಲಿ ಚೆನ್ನಾಗಿ ಶಿಕ್ಷಣ ಅಭ್ಯಾಸ ಮಾಡಿದರೆ ಮೆದುಳಿನಲ್ಲಿ ಗ್ರಹಿಸುವ ಶಕ್ತಿ ಹೆಚ್ಚಾಗುತ್ತದೆ. ಪರೀಕ್ಷಾ ಸಂದರ್ಭದಲ್ಲಿ ಎಂತಹ ಕಷ್ಟಕರ ಪ್ರಶ್ನೆಗಳನ್ನೂ ನೀರಾಯಸವಾಗಿ ಉತ್ತರಿಸಬಹುದು.ತಂದೆ ತಾಯಿಗಳು ಮಕ್ಕಳಿಗೆ ಇಷ್ಟವಾಗುವ ಶಿಕ್ಷಣವನ್ನು ಓದಿಸಿದಾಗ ತನ್ನ ಬುದ್ಧಿಮಟ್ಟಕ್ಕೆ ಆ ಮಗು ಯಶಸ್ವಿಯಾಗಬಲ್ಲದು ಎಂದರು. ಯುವಉದ್ಯಮಿ ಸದ್ಗುರು ಡಿ.ಎಸ್.ಪ್ರದೀಪ್ ಮಾತನಾಡಿ, ಯುವಕರು ವಿದ್ಯಾರ್ಥಿ ಜೀವನದಲ್ಲಿ ಸೇವಾ ಮನೋಭಾವನೆ ಬೆಳೆಸಿಕೊಂಡರೆ ಗ್ರಾಮಗಳು ಬೆಳೆದು ರಾಷ್ಟ್ರ ಅಭಿವೃದ್ಧಿಯಾಗುವುದು. ಶಿಕ್ಷಣ ಮುಗಿದ ನಂತರ ಸ್ಪರ್ಧಾತ್ಮಕ ಜಗತ್ತಿಗೆ ಕಾಲಿಡುವ ಯುವಕರು ತನಗೆ ಇಷ್ಟವಾಗುವ ಉದ್ಯಮದಲ್ಲಿ ತನ್ನನ್ನು ತೊಡಗಿಸಿಕೊಂಡಾಗ ಮಾತ್ರ ಅಭಿವೃದ್ಧಿಯಾಗಲು ಸಾಧ್ಯ ಯುವಕರೇ ಹೆಚ್ಚಿರುವ ಭಾರತದಲ್ಲಿ ದೇಶಿಯ ಉದ್ಯಮಗಳನ್ನು ಬೆಳೆಸುವ ಜವಾಬ್ದಾರಿ ಯುವಕರ ಮೇಲಿದೆ. ವಿದ್ಯಾರ್ಥಿ ಜೀವನದಲ್ಲಿ ಕಲಿಯುವ ಮೌಲ್ಯಯುತ ಶಿಕ್ಷಣ ತಂದೆ ತಾಯಿ, ಗುರು ಹಿರಿಯರನ್ನು ಗೌರವಿಸುವ ಶಿಕ್ಷಣ ವಾಗಿರುತ್ತದೆ ಎಂದರು.



**ಚಿತ್ರದುರ್ಗದಲ್ಲಿ ನೂತನವಾಗಿ ಇದೇ ಮೊದಲ ಬಾರಿಗೆ ಬೆಲ್ಜಿಯನ್ ವಾಫಲ್ ಶಾಖೆ ಬುಧವಾರ ಉದ್ಘಾಟನೆಯಾಗಿದೆ. ನಗರದ ಜೆಸಿಆರ್ ಬಡಾವಣೆಯ ಮುಖ್ಯ ರಸ್ತೆಯಲ್ಲಿ ಆರಂಭವಾಗಿದೆ. ನೂತನ ಶಾಖೆಯನ್ನು ಕಬೀರಾನಂದ ಆಶ್ರಮದ ಪೀಠಾಧ್ಯಕ್ಷ ಶಿವಲಿಂಗಾನಂದ ಸ್ವಾಮೀಜಿ ಮಾದಾರ ಚನ್ನಯ್ಯ ಗುರುಪೀಠ ಬಸವ ಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ , ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಶಾಖೆಯನ್ನು ಉದ್ಘಾಟಿಸಿದರು. ಈ ವೇಳೆ ಮಾಲೀಕರಾದ ಹೆಚ್.ಎಸ್ ರಾಘವೇಂದ್ರ ಸೇರಿ ಹಲವರು ಗಣ್ಯರು ಉಪಸ್ಥಿತರಿದ್ದರು.**

## ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣಾ ಕಚೇರಿಗೆ ಚಾಲನೆ

» ಚಿತ್ರದುರ್ಗ

ವಿಧಾನಪರಿಷತ್‌ನಲ್ಲಿ ಶಿಕ್ಷಕರ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತುವ ವಿಧಾನಪರಿಷತ್ ಸದಸ್ಯ ವೈ.ಎ.ನಾರಾಯಣಸ್ವಾಮಿರವರಿಗೆ ಪ್ರಥಮ ಪಾಶಸ್ತ್ಯದ ಮತ ನೀಡಿ ಗೆಲ್ಲಿಸುವಂತೆ ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಶಿಕ್ಷಕರುಗಳಲ್ಲಿ ಮನವಿ ಮಾಡಿದರು.

ಜೆ.ಸಿ.ಆರ್.ಬಡಾವಣೆ ನಾಲ್ಕನೆ ಕ್ರಾಸ್‌ನಲ್ಲಿ ಸೋಮವಾರ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣಾಕಚೇರಿಉದ್ಘಾಟಿಸಿಮಾತನಾಡಿದರು. ಇಡಿ ದೇಶದಲ್ಲಿ ಬಿಜೆಪಿ. ವಾತಾವರಣವಿದೆ. ಪ್ರಧಾನಿ ನರೇಂದ್ರಮೋದಿ ನಾಯಕತ್ವದಲ್ಲಿ ಭಾರತ ಆರ್ಥಿಕ ಸ್ವಾವಲಂಬನೆಯಲ್ಲಿ ಐದನೆ ಸ್ಥಾನದಲ್ಲಿದ್ದು, ಮುಂದಿನ ದಿನಗಳಲ್ಲಿ ಮೂರನೆ ಸ್ಥಾನಕ್ಕೆ ಬರುವುದರಲ್ಲಿ ಸಂಶಯವಿಲ್ಲ. ಜಮ್ಮು ಮತ್ತು ಕಾಶ್ಮೀರದಲ್ಲಿ ಆರ್ಟಿಕಲ್ 371 ರದ್ದುಪಡಿಸಿ ದಿಟ್ಟ ತೀರ್ಮಾನ ತೆಗೆದುಕೊಂಡಿರುವ ಪ್ರಧಾನಿ ಮೋದಿ ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟಿಸಿ ಐದು ನೂರು ವರ್ಷಗಳ ಭಾರತೀಯರ ಕನಸನ್ನು ಸಾಕಾರಗೊಳಿಸಿದ್ದಾರೆ.



ಆರ್ಥಿಕವಾಗಿ ಭಾರತ ಬಲವಾಗಿರುವುದಕ್ಕೆ ವಿಶ್ವನಾಯಕ ಮೋದಿ ಕಾರಣ ಎಂದು ಹೇಳಿದರು.ಆಗ್ನೇಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ಮಾತನಾಡಿ ನಾಲ್ಕನೆ ಬಾರಿಗೆ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದೇನೆ. ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸಿ ಮತ್ತೊಮ್ಮೆ ತಮ್ಮಗಳ ಸೇವೆ ಮಾಡುವ ಅವಕಾಶ ಕಲ್ಪಿಸಿ. ಶಿಕ್ಷಕರ ಕ್ಷೇತ್ರ ಬುದ್ದಿವಂತ ಮತದಾರರ ಚುನಾವಣೆಯಾಗಿದ್ದು, ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ಕಂಡುಕೊಳ್ಳುವುದಕ್ಕಾಗಿ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆಂದು ಭರವಸೆ ನೀಡಿದರು. ರಾಜ್ಯದಲ್ಲಿ ಬಿಜೆಪಿ. ಮತ್ತೊಮ್ಮೆ ಅಧಿಕಾರಕ್ಕೆ ಬರಬೇಕಾಗಿರುವುದರಿಂದ ನಿಮ್ಮೆಲ್ಲರ ಸಹಕಾರ ಮುಖ್ಯ ಎಂದು ವೈ.ಎ.ನಾರಾಯಣಸ್ವಾಮಿ ಶಿಕ್ಷಕರುಗಳಲ್ಲಿ ಕೋರಿದರು.ಡಿ.ಸಿ.ಸಿ.ಬ್ಯಾಂಕ್ ಮಾಜಿ ಅಧ್ಯಕ್ಷ ಲಕ್ಷ್ಮಿಕಾಂತ್, ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ, ಸೂರನಹಳ್ಳಿ ವಿಜಯಣ್ಣ, ಬಿಜೆಪಿ.ನಗರಾಧ್ಯಕ್ಷ ನವೀನ್ ಚಾಲುಕ್ಯ, ನಾಗರಾಜ್ ಬೇದ್ರೆ, ತಿಪ್ಪೇಸ್ವಾಮಿ, ನಿವೃತ್ತ ಶಿಕ್ಷಕರುಗಳಾದ ಜಯಣ್ಣ, ಚಿಕ್ಕನಾಗಪ್ಪ, ನೀಲಕಂಠಾಚಾರ್, ಶಿವಣ್ಣ, ನಾಗೇಂದ್ರಪ್ಪ, ಜ್ಞಾನಮೂರ್ತಿ, ನಾಗಲಿಂಗರೆಡ್ಡಿ ಹಾಜರಿದ್ದರು.

## ಪ್ರಮುಖ ಸುದ್ದಿ

### ತ್ರೈಮಾಸಿಕ ಸಮನ್ವಯ ಸಮಿತಿ ಸಭೆ- ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಶಾಲಾ ಕಾಲೇಜು ಬಳಿ ತಂಬಾಕು ಮಾರಾಟಕ್ಕೆ ಕಡಿವಾಣ ಹಾಕಿ

» ಚಿತ್ರದುರ್ಗ

ಶಾಲಾ ಕಾಲೇಜು ಬಳಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದು ಕಾನೂನಿನ ಸ್ಪಷ್ಟ ಉಲಂಘನೆಯಾಗಿದೆ. ತಂಬಾಕು ನಿಯಂತ್ರಣ ಕೋಶ ಅಧಿಕಾರಿಗಳು, ಸ್ಥಳೀಯ ಪೊಲೀಸರು ಹಾಗೂ ಶಾಲಾ ಕಾಲೇಜುಗಳ ಮುಖ್ಯಸ್ಥರು ಈ ಬಗ್ಗೆ ಗಮನಹರಿಸಿ, ಶಾಲಾ ಕಾಲೇಜುಗಳ ಬಳಿ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಕಡಿವಾಣ ಹಾಕುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

ಜಿಲ್ಲಾಧಿಕಾರಿಸಭಾಂಗಣದಲ್ಲಿಬುಧವಾರ ಜರುಗಿದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ತ್ರೈಮಾಸಿಕ ಸಮನ್ವಯ ಸಮಿತಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. 18 ವರ್ಷದ ಒಳಗಿನ ಮಕ್ಕಳಿಗೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದು ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದೆ. ಶಾಲಾ ಮಕ್ಕಳು



ಈ ಉತ್ಪನ್ನಗಳನ್ನು ಬಳಸದಂತೆ ಹೆಚ್ಚು ಜಾಗೃತಿ ವಹಿಸಬೇಕು. ನಿಯಮಗಳನ್ನು ಮೀರಿ ಮಾರಾಟ ಮಾಡುವ ಅಂಗಡಿಗಳ ಮೇಲೆ ದಾಳಿ ನಡೆಸಿ ದಂಡ ವಿಧಿಸಬೇಕು. ಮಕ್ಕಳು ಯುವ ಜನರಿಗೆ ತಂಬಾಕು ಉತ್ಪನ್ನಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮದ ಕುರಿತು ಜಾಗೃತಿ ಮೂಡಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಪ್ರಸಕ್ತ ತ್ರೈಮಾಸಿಕ ಅವಧಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದಿಂದ ಶಾಲಾ ಕಾಲೇಜುಗಳಲ್ಲಿ 100 ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗಿದೆ. ಒಟ್ಟು 60 ಶಾಲಾ ಕಾಲೇಜುಗಳನ್ನು ತಂಬಾಕು ಮುಕ್ತ ಎಂದು ಘೋಷಿಸಲಾಗಿದೆ. 111 ದಾಳಿಗಳನ್ನು ನಡೆಸಲಾಗಿದೆ. ಎಲ್ಲಾ ತಾಲ್ಲೂಕುಗಳಲ್ಲಿಯು ಸಮನ್ವಯ ಸಮತಿ ಸಭೆಗಳನ್ನುನಡೆಸಲಾಗಿದೆ. ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ಇದುವರೆಗೂ 4515 ಜನರು ಸಮಾಲೋಚನೆ ಹಾಗೂ ವಿವಿಧ ಸೇವೆಗಳನ್ನು ಪಡೆದಿದ್ದಾರೆ. ತಂಬಾಕು ಉತ್ಪನ್ನಗಳ ಬಳಕೆಯ ದಾಸರಾಗಿದ್ದ 334 ಜನರಿಗೆ ಚಿಕಿತ್ಸೆ ನೀಡಲಾಗಿದೆ. ಒಟ್ಟು 13 ಜನರು ತಂಬಾಕು ತ್ಯಜಿಸಿ ಆರೋಗ್ಯವಂತ ಜೀವನ ನಡೆಸುತ್ತಿದ್ದಾರೆ ಎಂದು ಜಿಲ್ಲಾ ತಂಬಾಕು ನಿಯಂತ್ರಣ ಅಧಿಕಾರಿ ಡಾ.ಚಂದ್ರಶೇಖರ್ ವಿ ಕಂಬಾಳಿ ಮಠ ಸಭೆಯಲ್ಲಿ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ವಿ.ಟಿ.ರೇಣುಪ್ರಸಾದ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ರವಿಶಂಕರ್ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿ ಡಾ.ನಾಗರಾಜ, ಪೌರಾಯುಕ್ತೆ ರೇಣುಕಾ, ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಪ್ರಭುದೇವ್.ವಿ.ಎಂ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಸರ್ಕಾರಿ ಶಾಲೆಗಳ ಸಬಲೀಕರಣ ಕುರಿತು ತರಬೇತಿ ಕಾರ್ಯಾಗಾರ



» ಚಿತ್ರದುರ್ಗ

ಶಿಕ್ಷಕರು, ಶಾಲಾಭಿವೃದ್ಧಿ ಸಮಿತಿ ಹಾಗೂ ಪೋಷಕರು ಜೊತೆಗೂಡಿ ಸಮನ್ವಯತೆಯಿಂದ ಕೆಲಸ ಮಾಡಿದಾಗ ಮಾತ್ರ ಅಂತಹ ಶಾಲೆಯಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯ ಎಂದು ಶಿಕ್ಷಣ ತಜ್ಞರು ಹಾಗೂ ಕರ್ನಾಟಕ ರಾಜ್ಯ ಎಸ್.ಡಿ.ಎಂ.ಸಿ. ಮಹಾ ಪೋಷಕ ನಿರಂಜನಾರಾಧ್ಯ ಅಭಿಪ್ರಾಯಪಟ್ಟರು.

ದಂಡಿನಕುರುಬರಹಟ್ಟಿಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಾಲ್ಲೂಕು ಶಾಲಾಭಿವೃದ್ದಿ ಮತ್ತು ಮೇಲುಸ್ತುವಾರಿಗಳ ಸಮಿತಿ ಅಧ್ಯಕ್ಷರು-ಉಪಾಧ್ಯಕ್ಷರುಗಳಿಗೆ ತಾಲ್ಲೂಕಿನ ಎಲ್ಲಾ ಸಿ.ಆರ್.ಪಿ. ಬಿ.ಆರ್.ಪಿ.ಗಳಿಗೆ ಸರ್ಕಾರಿ ಶಾಲೆಗಳ ಸಬಲೀಕರಣ ಕುರಿತು ಇತ್ತೀಚೆಗೆ ಏರ್ಪಡಿಸಲಾಗಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಹೊಸದಾಗಿ ಶಿಕ್ಷಣ ಹಕ್ಕು ಕಾಯಿದೆಯನ್ನು ಸರ್ಕಾರ ಜಾರಿಗೆ ತಂದಿದೆ. ಮಕ್ಕಳ ಶಿಕ್ಷಣ ಸಂವಿಧಾನದಲ್ಲಿ ಮೂಲಭೂತ ಹಕ್ಕಾಗಿ ಸೇರಿದೆ ಎನ್ನುವುದನ್ನು ಶಾಲಾಭಿವೃದ್ದಿ ಸಮಿತಿಯವರು ತಿಳಿದುಕೊಂಡಿರಬೇಕು. ಮಕ್ಕಳ ಶಿಕ್ಷಣ ಒಬ್ಬರ ಕರ್ತವ್ಯವಲ್ಲ. ಶಿಕ್ಷಕರು, ಎಸ್.ಡಿ.ಎಂ.ಸಿ. ಹಾಗೂ ಪೋಷಕರುಗಳ ಸಾಮಾಜಿಕ ಜವಾಬ್ದಾರಿ. ಸಾಮಾಜಿಕ ಒಳಿತಿಗಾಗಿ ಶಿಕ್ಷಣ ಬೇಕು. ಸಾಕ್ಷರತೆಯೇ ಮಾನದಂಡವಾಗಬಾರದು ಎಂದು ತಿಳಿಸಿದರು.

ಸರ್ಕಾರಿ ಶಾಲೆ ಗ್ರಾಮದಲ್ಲಿದ್ದರೆ ಅದು ಕೇವಲ ಮಕ್ಕಳಿಗೆ ಪಾಠ ಹೇಳಿಕೊಡುವ ಶಾಲೆಯಲ್ಲ. ಒಂದು ಸಂಸ್ಥೆಯಿದ್ದಂತೆ. ಶಿಕ್ಷಣದ ಜೊತೆ ಮಕ್ಕಳಿಗೆ ಅನೇಕ ಮೌಲ್ಯಗಳನ್ನು ಕಟ್ಟಿಕೊಡುತ್ತದೆ. ಗಣರಾಜ್ಯೋತ್ಸವ, ಸ್ವಾತಂತ್ರ್ಯ ದಿನಾಚರಣೆಯಂತಹ ಮಹತ್ವದ ದಿನಗಳಲ್ಲಿ ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಣ ತ್ಯಾಗ ಮಾಡಿದ ಹಿರಿಯರ ಇತಿಹಾಸಗಳನ್ನು ತಿಳಿಸುತ್ತದೆ. ಶಿಕ್ಷಣವೆನ್ನುವುದು ಅಂಕಗಳಿಗೆ ಮಾತ್ರ ಸೀಮಿತವಾಗಬಾರದು. ಎಲ್ಲಾ ಅಂಶಗಳನ್ನೊಳಗೊಂಡಾಗ ಪರಿಪೂರ್ಣವಾಗುತ್ತದೆ. ಸಮಾಜಕ್ಕೆ ಒಳ್ಳೆಯವರಾಗಿ ಸುತ್ತಮುತ್ತಲು ಏನು ನಡೆಯುತ್ತದೆ ಎನ್ನುವುದನ್ನು ಗಮನಿಸಿ ಅನ್ಯಾಯವನ್ನು ಖಂಡಿಸುವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು. ಅದುವೆ ನಿಜವಾದ ಶಿಕ್ಷಣ ಎಂದು ಹೇಳಿದರು.ಕ್ಷೇತ್ರಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಮಾತನಾಡಿ ಸರ್ಕಾರಿ ಶಾಲೆಗಳ ಬಲವರ್ಧನೆಯಲ್ಲಿ ಎಸ್.ಡಿ.ಎಂ.ಸಿ. ಪಾತ್ರ ಮುಖ್ಯ. ಕೇವಲ ಸರ್ಕಾರ, ಶಿಕ್ಷಕರು, ಪೋಷಕರುಗಳ ಜವಾಬ್ದಾರಿ ಎಂದು ಭಾವಿಸುವುದು ಸರಿಯಲ್ಲ. ಎಸ್.ಡಿ.ಎಂ.ಸಿ.ಗೆ ಹಲವು ರೀತಿಯ ಅಧಿಕಾರವಿದೆ. ಶಿಕ್ಷಕರು ಹಾಗೂ ಪೋಷಕರುಗಳ ಜೊತೆ ಕೈಜೋಡಿಸಿದರೆ. ಅಂತಹ ಶಾಲೆಗಳು ಅಭಿವೃದ್ದಿಯ ಕಡೆಗೆ ಸಾಗುತ್ತದೆ. ಅದಕ್ಕಾಗಿ ಹೆಚ್ಚು ಹೆಚ್ಚು ಕ್ರಿಯಾಶೀಲರಾಗಿ ಕೆಲಸ ಮಾಡುವಂತೆ ಕರೆ ನೀಡಿದರು.ಸಮ ಸಮಾಜಕ್ಕಾಗಿ ಗೆಳೆಯರ ಬಳಗದ ಅಧ್ಯಕ್ಷ ಟಿ.ಪಿ.ಗಂಗಾಧರ್, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ ರಾಜ್ಯಾಧ್ಯಕ್ಷ ಎ.ಐ.ಪಿ.ಎಫ್.ನ ಕಾರ್ಯಾಧ್ಯಕ್ಷ ಬಸವರಾಜ ಗುಡಿಕಾರ್, ಬಿ.ಆರ್.ಸಿ. ಸಂಪತ್‌ಕುಮಾರ್, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷ ಶಿವಮೂರ್ತಿ, ಉಪಾಧ್ಯಕ್ಷ ಕಾಟೀಶ್, ಸದಸ್ಯರು, ಗ್ರಾಮ ಪಂಚಾಯಿತಿ ಸದಸ್ಯರುಗಳು, ಸ್ನೇಹ ಬಳಗದ ಸದಸ್ಯರು, ಮುಖ್ಯ ಶಿಕ್ಷಕಿ ಬಿ.ಟಿ.ಲೋಲಾಕ್ಷಮ್ಮ ವೇದಿಕೆಯಲ್ಲಿದ್ದರು.

### ಡಾ.ಶಶಿಕುಮಾರ್ ವಿ.ಎಂ. "2023 ರ ವರ್ಷದ ವ್ಯಕ್ತಿ" ಪ್ರಶಸ್ತಿಗೆ ಆಯ್ಕೆ

» ದಾವಣಗೆರೆ

ಇದೀಗ 'ಜಿಲ್ಲೆ ಸಮಾಚಾರ' ದಿನಪತ್ರಿಕಾ ಬಳಗದ ಸಂಭ್ರಮ 17 ವರ್ಷಗಳ ನಡೆಯತ್ತ ಧಾವಿಸಿದೆ. ಜಿಲ್ಲಾ ಮಟ್ಟದ ಪತ್ರಿಕೆಯೊಂದು ಇಡೀ ರಾಜ್ಯಕ್ಕೆ ಮಾದರಿ ಎಂಬಂತೆ ನಮ್ಮ ನಡುವಿನ ಸಾಧಕರನ್ನು ಗುರುತಿಸಿ 'ವರ್ಷದ ವ್ಯಕ್ತಿ' ಗೌರವದೊಂದಿಗೆ ಸನ್ಮಾನಿಸುವ ಸಂದರ್ಭವನ್ನು ಪ್ರತಿ ವರ್ಷವೂ ದಾಖಲಿಸುತ್ತಾ ಬಂದಿದೆ. ಸನ್ಮಾನಿತರು ಸಮಾಜದ ವಿವಿಧ ಕ್ಷೇತ್ರಗಳಲ್ಲಿ ತಮ್ಮ ವಿಶಿಷ್ಟ ಸಾಧನೆಯ ಛಾಪು ಮೂಡಿಸಿದ್ದಾರೆಂಬುದು ಗಮನಾರ್ಹ ಸಂಗತಿ.ಈ ನಿಟ್ಟಿನಲ್ಲಿ 2023 ನೇ ಸಾಲಿಗಾಗಿ ವಿಶಿಷ್ಟ ಸಾಧಕರು ' ವರ್ಷದ ವ್ಯಕ್ತಿ' ಯಾಗಿ ಆಯ್ಕೆಯಾಗಿರುವುದನ್ನು 'ಜಿಲ್ಲೆ ಸಮಾಚಾರ' ಪತ್ರಿಕಾ ಬಳಗ ಹೆಮ್ಮೆಯಿಂದ ಪ್ರಕಟಿಸುತ್ತಿದೆ. ಒಮ್ಮತದ ಆಯ್ಕೆಯಾಗಿ 'ತಪೋವನ'ದ ಸಂಸ್ಥಾಪಕರಾದ ಡಾ.ಶಶಿಕುಮಾರ್ ವಿ.ಎಂ.ಅವರನ್ನು ಬಳಗವು ಸನ್ಮಾನಿಸಲು ನಿರ್ಧರಿಸಿದೆ. 2024 ರ ಫೆಬ್ರವರಿ ಎರಡನೇ ವಾರದಲ್ಲಿ ಈ ಆಯ್ಕೆಯ ಪ್ರಶಸ್ತಿ ಪ್ರದಾನ ಸಮಾರಂಭವು ನಗರದ ಮಧ್ಯಭಾಗದ ಆವರಣದಲ್ಲಿ ನಡೆಯಲಿದೆ. ಗಣ್ಯರು ಈ ಸ್ಮರಣೀಯ ಸಮಾರಂಭಕ್ಕೆ ಸಾಕ್ಷಿಯಾಗಲಿದ್ದಾರೆಂದು ಪತ್ರಿಕಾ ಬಳಗದ ವಿ.ಹನುಮಂತಪ್ಪ,ಹೆಚ್.ವೆಂಕಟೇಶ್, ಕೆ.ಎನ್.ಜಯಪ್ರಕಾಶ್, ಡಾ.ಈಶ್ವರಶರ್ಮ, ಸಿ.ಕೆ. ಆನಂದತೀರ್ಥಾಚಾರ್,ಸಾ.ಗಣೇಶ್ ಶೆಣೈ,ಶ್ರೀಮತಿ ಸತ್ಯಭಾಮ ಮಂಜುನಾಥ್, ಶ್ರೀಮತಿ ಭಾರತಿ ಮುಂತಾದವರು ಜಂಟಿ ತಿಳಿಸಿದ್ದಾರೆ.

ಹಿಂದುಳಿದ ವಿದ್ಯಾರ್ಥಿಗಳಿಗೆ ವಸತಿಯುತ ಶಿಕ್ಷಣ ನೀಡಿ ಸಮಾಜದ ಮುಖ್ಯವಾಹಿನಿಗೆ ತರುವುದೇ ಹಾಸ್ಟೆಲ್‌ಗಳ ಸದುದ್ದೇಶ; ಜಿಲ್ಲಾಧಿಕಾರಿ

# ವಿದ್ಯಾರ್ಥಿನಿಲಯ, ವಸತಿ ಶಾಲೆ ಸಿಬ್ಬಂದಿಗೆ ತರಬೇತಿ

» ದಾವಣಗೆರೆ

ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ ಆರ್ಥಿಕವಾಗಿ ಬಡವರಾಗಿರುವ, ಹಿಂದುಳಿದ, ಪರಿಶಿಷ್ಟ ಜಾತಿ ಹಾಗೂ ಪ.ವರ್ಗ,ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಕಲ್ಪಿಸಿ ಸಮಾಜದ ಮುಖ್ಯವಾಹಿನಿಗೆ ತರಬೇಕೆಂಬ ಸದುದ್ದೇಶದಿಂದ ಹಾಸ್ಟೆಲ್‌ಗಳ ಮೂಲಕ ಮಕ್ಕಳಿಗೆ ಶಿಕ್ಷಣ ನೀಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಡಳಿತ ಕಚೇರಿಯ ತುಂಗಾಭದ್ರ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆಯಿಂದ ಜಿಲ್ಲೆಯಲ್ಲಿನ ಎಲ್ಲಾ ಮೆಟ್ರಿಕ್ ಪೂರ್ವ, ನಂತರದ ಹಾಗೂ ವಸತಿ ಶಾಲೆಗಳ ಪ್ರಾಂಶುಪಾಲರು, ವಾರ್ಡನ್‌ಗಳು, ಅಡುಗೆ ಸಿಬ್ಬಂದಿಗಳಿಗೆ ಏರ್ಪಡಿಸಲಾದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.



ದಾವಣಗೆರೆ ಜಿಲ್ಲೆಯಲ್ಲಿ 500 ಕ್ಕೂ ಹೆಚ್ಚು ವಿದ್ಯಾರ್ಥಿನಿಲಯಗಳಿವೆ, ಈ ನಿಲಯದ ವಾರ್ಡನ್‌ಗಳಿಗೆ ಈ ಕಾರ್ಯಾಗಾರದ ಮೂಲಕ ಬಹಳ ಸ್ಪಷ್ಟತೆ ನೀಡಲು ತರಬೇತಿ ಹಮ್ಮಿಕೊಳ್ಳಲಾಗಿದೆ. ಹಾಸ್ಟೆಲ್‌ನಲ್ಲಿ ಬಡವರು, ಶೋಷಿತರು, ದಲಿತರು, ಅಲ್ಪಸಂಖ್ಯಾತರು, ಮುಖ್ಯವಾಹಿನಿಯಿಂದ ದೂರ ಇರುವ ವಿದ್ಯಾರ್ಥಿಗಳು ಇಲ್ಲಿಗೆ ಬರುತ್ತಾರೆ. ಈ ವಿದ್ಯಾರ್ಥಿಗಳಿಗೆ ಅತ್ಯುತ್ತಮವಾದ ಶಿಕ್ಷಣವನ್ನು ನೀಡುವುದರ ಜೊತೆಗೆ ವಸತಿ ಮತ್ತು ಊಟದ ಸೌಲಭ್ಯಗಳನ್ನು ಕೊಡುತ್ತಿರುವುದು ಬಹುಶಃ ಇದು ಬೇರೆ ದೇಶಗಳಿಗೂ ಕೂಡ ಮಾದರಿಯಾಗಿದೆ.

ಕಳೆದ ಕೆಲವು ತಿಂಗಳ ಹಿಂದೆ ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಯಲ್ಲಿ ಓದುತ್ತಿರುವ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಆಕಸ್ಮಿಕವಾಗಿ ಅವರ ಆರೋಗ್ಯದಲ್ಲಿ ಏರುಪೇರಾಗಿ ಸಮಸ್ಯೆಯಾಗಿರುವುದನ್ನು ಕಾಣಲಾಗಿದೆ. ಇದಕ್ಕೆ ಕಾರಣ ನಮ್ಮ ಕರ್ತವ್ಯಗಳನ್ನು ನಾವು ಸರಿಯಾಗಿ ಮಾಡದಿರುವುದರಿಂದ ಘಟನೆಗಳಾಗಿವೆ.

ಹಾಸ್ಟೆಲ್‌ನಲ್ಲಿ ಶಿಕ್ಷಣ, ಶಿಸ್ತುಬದ್ದ ನಿರ್ವಹಣೆ, ಸುಚಿತ್ವ ಮತ್ತು ರುಚಿಯಾದ ಊಟವನ್ನು ವಿದ್ಯಾರ್ಥಿಗಳಿಗೆ ನಾವು ಹೇಗೆ ಕೊಡಬೇಕು ಎಂದು ತಿಳಿದುಕೊಂಡು ಎಲ್ಲಾ ವಿದ್ಯಾರ್ಥಿಗಳ ಬಗ್ಗೆ ಸಂಪೂರ್ಣ ನಿಗಾವಹಿಸಿ ತಮ್ಮ ಕರ್ತವ್ಯ ನಿರ್ವಹಿಸಬೇಕೆಂದು ತಿಳಿಸಿದರು.

ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ಮಾತಾನಾಡಿ ಕಳೆದ ಬಾರಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಲ್ಲಿ ಸ್ಫೂರ್ತಿಯನಡೆಒಂದುಕಾರ್ಯಕ್ರಮವಾಗಿ ಬಜೆಟ್‌ನಲ್ಲಿ ಘೋಷಣೆಯಾಗಿದೆ. ನಮ್ಮ ದೇಹದ ಆರೋಗ್ಯ ಮತ್ತು ಸ್ಪೋಕನ್ ಇಂಗ್ಲೀಷ್ ತರಗತಿಗಳನ್ನು ಪ್ರತಿವಾರ ಪ್ರಾಧ್ಯಾಪಕರುಗಳಿಂದ ಏರ್ಪಡಿಸಲಾಗುತ್ತಿತ್ತು, ಇದಕ್ಕೆ ಹೆಚ್ಚಿನ ಸ್ಪಂದನೆ ಕೂಡ ಸಿಕ್ಕಿತ್ತು, ಇಂತಹ ಕಾರ್ಯಕ್ರಮಗಳನ್ನು ಜಿಲ್ಲೆಯಲ್ಲಿ ಮಾಡಬೇಕೆಂದರು.

ಹಾಸ್ಟೆಲ್‌ಗಳಲ್ಲಿ ಊಟ, ವಸತಿ ನಿರ್ವಹಣೆ ಬಗ್ಗೆ ವಾರ್ಡನ್‌ಗಳ ವಾಟ್ಸಪ್ ಗ್ರೂಪ್ ರಚನೆ ಮಾಡಿಕೊಂಡು ಕುಂದುಕೊರತೆಗಳ ನಿವಾರಣೆಗೆ ಕ್ರಮ ಕೈಗೊಳ್ಳಲು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಕೆ.ನಾಗರಾಜ್ ಪ್ರಾಸ್ತವಿಕವಾಗಿ ಮಾತನಾಡಿದರು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ್ ಮಠದ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಬೇಬಿ ಸುನೀತಾ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಗಾಯತ್ರಿ ಹಾಗೂ ವಸತಿ ಶಾಲೆಗಳ ಪ್ರಾಂಶುಪಾಲರು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಕುರುಡಿಹಳ್ಳಿ: ಮರಕ್ಕೆ ರಭಸವಾಗಿ ಡಿಕ್ಕಿ ಹೊಡೆದ ಕಾರು; ಇಬ್ಬರು ಸ್ಥಳದಲ್ಲೇ ಸಾವು

» ಚಳ್ಳಕೆರೆ

ಕಳೆದ ಕೆಲವು ತಿಂಗಳುಗಳಿಂದ ನಿಯಂತ್ರಣದಲ್ಲಿದ್ದ ಅಪಘಾತ ಪ್ರಕರಣಗಳು ಪುನಃ ಆರಂಭವಾಗಿದ್ದು, ಅನೇಕ ಸಂದರ್ಭಗಳಲ್ಲಿ ವಾಹನ ಚಾಲಕರ ಅಜಾಗರೂಕತೆಯಿಂದ ಘಟನೆಗಳು ಸಂಭವಿಸುತ್ತಿದೆ ಎನ್ನಲಾಗಿದೆ.

ತಾಲ್ಲೂಕಿನ ಕುರುಡಿಹಳ್ಳಿ ಗೇಟ್ ಬಳಿ ಮಂಗಳವಾರ ತಡರಾತ್ರಿ ಸುಮಾರು 10.30ರ ಸಮಯದಲ್ಲಿ ಚಿತ್ರದುರ್ಗದಿಂದ ಚಳ್ಳಕೆರೆ ಕಡೆಗೆ ಆಗಮಿಸುತ್ತಿದ್ದ ಕಾರು ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮವಾಗಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಚಿತ್ರಯ್ಯನಹಟ್ಟಿಯ ಗುತ್ತಿಗೆದಾರ ಜೆ.ಪಿ.ವೆಂಕಟೇಶ್(55),ಸೂಜಿಮಲ್ಲೇಶ್ವರ ನಗರದ ವೆಂಕಟೇಶ್(55) ಸ್ಥಳದಲ್ಲೇ ಮೃತಪಟ್ಟಿದ್ದು, ಕಾರು ಚಾಲಕ ಕಿಶೋರ್(31) ತೀವ್ರವಾಗಿ ಗಾಯಗೊಂಡು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮಣಿಪಾಲ್ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ಡಿಕ್ಕಿ ಹೊಡೆದ ಕೂಡಲೇ ಸಾರ್ವಜನಿಕರು ನೀಡಿದ ಮಾಹಿತಿ ಮೇರೆಗೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಮೃತ ಶವಗಳನ್ನು ಸಾರ್ವಜನಿಕ ಆಸ್ಪತ್ರೆಯ ಶವಗಾರದಲ್ಲಿರಿಸಿ



ಚಾಲಕ ಕಿಶೋರನನ್ನು ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ.

ಜಿಲ್ಲಾ ರಕ್ಷಣಾಧಿಕಾರಿ ಭೇಟಿ :- ಕುರುಡಿಹಳ್ಳಿ ಗ್ರಾಮದ ಬಳಿ ಹುಣಸೆ ಮರಕ್ಕೆ ಕಾರು ಡಿಕ್ಕಿ ಹೊಡೆದು ಇಬ್ಬರು ಮೃತಪಟ್ಟ ಘಟನೆಗೆ ಸಂಬಂಧಪಟ್ಟಂತೆ ಜಿಲ್ಲಾ ರಕ್ಷಣಾಧಿಕಾರಿ ಧರ್ಮೇಂದ್ರಕುಮಾರ್‌ಮೀನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಡಿವೈಎಸ್ಪಿ ರಾಜಣ್ಣ, ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ಉಪಸ್ಥಿತರಿದ್ದರು. ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿದ್ದಾರೆ.

## ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯಿಂದ ಉಚಿತ ಮನೆ



» ಚಳ್ಳಕೆರೆ

ನಿರಂತರ ಬಡತನ ಹಾಗೂ ಸಮಸ್ಯೆಗಳ ನಡುವೆ ತೊಳಲಾಡುವ ನಿರ್ಗತಿಕರಿಗೆ ಶ್ರೀಕ್ಷೇತ್ರ ಧರ್ಮಸ್ಥಳ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗಡೆ ಹಾಗೂ ಹೇಮಾವತಿ ಹೆಗಡೆಯವರು ವಾತ್ಸಲ್ಯ ಯೋಜನೆಯಡಿ ಮನೆಯನ್ನುನಿರ್ಮಿಸಿಆರ್ಹಫಲಾನುಭವಿಗಳಿಗೆನೀಡುವಕಾರ್ಯವನ್ನು ಹಲವಾರು ವರ್ಷಗಳಿಂದ ಹಮ್ಮಿಕೊಂಡಿದ್ದು ಜಿಲ್ಲೆಯಲ್ಲಿ ಈಗಾಗಲೇ ನೂರಾರು ಸಂಖ್ಯೆಯ ಕಡುಬಡವರಿಗೆ ವಾತ್ಸಲ್ಯ ಯೋಜನೆಯಡಿ ಮನೆಗಳನ್ನು ವಿತರಣೆ ಮಾಡಲಾಗಿದೆ ಎಂದು ಪ್ರಾದೇಶಿಕ ನಿರ್ದೇಶಕಿ ಗೀತಾ ತಿಳಿಸಿದರು. ಅವರು, ಬುಧವಾರ ಪರಶುರಾಮಪುರ ಹೋಬಳಿಯ ಸೂರನಹಳ್ಳಿ ಗ್ರಾಮದ ಗೌರಮ್ಮ ಮತ್ತು ಬಜ್ಜಪ್ಪ ಎಂಬುವವರಿಗೆ ಸುಮಾರು ಒಂದು ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ವಾತ್ಸಲ್ಯ ಮನೆಯನ್ನು ಹಸ್ತಾಂತರಿಸಿ ಮಾತನಾಡಿದರು. ಜಿಲ್ಲಾ ನಿರ್ದೇಶಕ ವಿಜಯ್‌ಕುಮಾರ್‌ಸುವರ್ಣ ಪ್ರಾಸ್ತಾವಿಕವಾಗಿ ಮಾತನಾಡಿ, ಕಳೆದ ಸುಮಾರು 10 ವರ್ಷಗಳಿಂದ ಚಳ್ಳಕೆರೆ ತಾಲ್ಲೂಕಿನಾದ್ಯಂತ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಸಾರ್ವಜನಿಕರಿಗೆ ಹಲವಾರು ಸೌಲಭ್ಯ ನೀಡಲಾಗುತ್ತಿದೆ. ಪ್ರತಿ ಗ್ರಾಮದಲ್ಲೂ ಮಹಿಳಾ ಸ್ತ್ರೀಶಕ್ತಿ ಸಂಘ ಸ್ಥಾಪಿಸಿ ಅದರ ಆರ್ಥಿಕ ಬಲವರ್ಧನೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ. ಯಾವುದೇ ಆಸರೆ ಇಲ್ಲದೆ ನಿರ್ಗತಿಕ ಕುಟುಂಬಗಳಿಗೆ ವಾತ್ಸಲ್ಯ ಯೋಜನೆಯಡಿ ಮನೆಗಳನ್ನು ನಿರ್ಮಿಸಿ ವಿತರಿಸುವ ಕಾರ್ಯಕ್ರಮ ಬರದಿಂದ ಸಾಗಿದೆ. ಪೂಜ್ಯರ ಆಶೀರ್ವಾದದಿಂದ ಇಂತಹ ಒಳ್ಳೆಯ ಕಾರ್ಯಕ್ರಮಗಳು ನಡೆಯುತ್ತಾ ಬಂದಿವೆ ಎಂದರು. ವಾತ್ಸಲ್ಯ ಯೋಜನೆಯಡಿ ಮನೆ ಸ್ವೀಕರಿಸಿ ಮಾತನಾಡಿದ ಗೌರಮ್ಮ ಮತ್ತು ಬಜ್ಜಪ್ಪ, ನಾವು ಸ್ವತಃ ಮನೆ ಹೊಂದಬೇಕೆಂಬ ಕನಸು ಕಂಡಿದ್ದೆವು. ಆದರೆ, ನಮ್ಮ ದುಡಿಮೆ ಅತಿಕಡಿಮೆ ಇದ್ದು, ಇದು ಸಾಧ್ಯವಾಗದು ಎಂದು ಭಾವಿಸಿದ್ದೇವು. ಆದರೆ, ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಅಧಿಕಾರಿಗಳು ಮಾಹಿತಿ ಪಡೆದು ಮನೆ ನಿರ್ಮಿಸಿಕೊಟ್ಟಿದ್ದಾರೆ. ಸಂಸ್ಥೆಗೆ ಅಬಾರಿಯಾಗಿದ್ದೇವೆಂದರು.



**ಹೊಸದುರ್ಗ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ನಡೆದ ರಾಷ್ಟ್ರೀಯ ಭಾವೈಕ್ಯತಾ ಶಿಬಿರದ ಸಮಾರೋಪ ಸಮಾರಂಭದಲ್ಲಿ ಪಾಲಿಟೆಕ್ನಿಕ್ ವಿದ್ಯಾರ್ಥಿನಿಯರು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನರ್ತಿಸಿ ಸಂಭ್ರಮಿಸಿದರು.**

## ಪ್ರಮುಖ ಸುದ್ದಿ

# ಪತ್ರಕರ್ತರ ಸಂಘದ ವಾರ್ಷಿಕ ಪ್ರಶಸ್ತಿ ಪ್ರಕಟ

**ಬೆಂಗಳೂರು:** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) 2022-23 ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನು ಪ್ರಕಟಿಸಲಾಗಿದ್ದು, ದಾವಣಗೆರೆಯಲ್ಲಿ ಇದೇ ಫೆ. 3 ಮತ್ತು 4 ರಂದು ನಡೆಯುವ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು ಎಂದು ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದ್ದಾರೆ.

**ಪ್ರಶಸ್ತಿಗಳ ವಿವರ:**

1. ಜಿ. ನಾರಾಯಣಸ್ವಾಮಿ ಪ್ರಶಸ್ತಿ (ಅತ್ಯುತ್ತಮ ಗ್ರಾಮಾಂತರ ವರದಿಗೆ) ಸಣ್ಣವಂಡ ಕಿಶೋರ್ ನಾಚಪ್ಪ, ಮಡಿಕೇರಿ ಸಂಶುದ್ದೀನ್ ಕೆ.ಎಣ್ಣೂರು, ವಾರ್ತಾಭಾರತಿ, ಮಂಗಳೂರು
2. ಪಟೇಲ್ ಭೈರಹನುಮಯ್ಯ ಪ್ರಶಸ್ತಿ (ಅತ್ಯುತ್ತಮ ಮಾನವೀಯ ವರದಿಗೆ) ಸಿ.ಎನ್.ಶಿವಶಂಕರ, ದೂರದರ್ಶನ ವರದಿಗಾರ, ಕೋಲಾರ ಎಂ.ಎನ್. ಯೋಗೇಶ್, ಪ್ರಜಾವಾಣಿ, ಮಂಡ್ಯ
3. ಗಿರಿಧರ್ ಪ್ರಶಸ್ತಿ (ಅತ್ಯುತ್ತಮ ತನಿಖಾ ವರದಿಗೆ) ಡಿ.ಉಮೇಶ್ ನಾಯ್ಕ, ವಿಜಯವಾಣಿ, ತರೀಕೆರೆ ಎಲ್.ದೇವರಾಜ್, ವಿಜಯ ಕರ್ನಾಟಕ,
4. ಬಿ. ಎಸ್. ವೆಂಕಟರಾಂ ಪ್ರಶಸ್ತಿ (ಅತ್ಯುತ್ತಮ ಸ್ಕೂಪ್ ವರದಿಗೆ) ಚಂದ್ರಹಾಸ ಹಿರೇಮಳಲಿ, ಪ್ರಜಾವಾಣಿ, ಬೆಂಗಳೂರು ಎಸ್.ಶ್ರೀಧರ, ವಿಜಯ ಕರ್ನಾಟಕ, ರಾಮನಗರ
5. ಕೆ. ಎ. ನೆಟ್ಟಕಲಪ್ಪ ಪ್ರಶಸ್ತಿ (ಅತ್ಯುತ್ತಮ ಕ್ರೀಡಾ ವರದಿಗೆ) ಮಂಜುನಾಥ, ಜಾದಗೆರೆ, ವಿಜಯ ಕರ್ನಾಟಕ, ಬೆಂಗಳೂರು ಇಬ್ರಾಹೀಂ ಖಲೀಲ್ ಬನ್ನೂರು, ವಾರ್ತಾಭಾರತಿ
6. ಖಾದ್ರಿ ಶಾಮಣ್ಣ ಪ್ರಶಸ್ತಿ (ಅತ್ಯುತ್ತಮ ರಾಜಕೀಯ ವಿಮರ್ಶೆ) ಶಶಿಧರ ಹೆಗಡೆ, ನಂದಿಕಲ್, ವಿಜಯ ಕರ್ನಾಟಕ ಡಿ.ಎಚ್.ಸುಖೇಶ್, ಪಬ್ಲಿಕ್ ಟಿವಿ
7. ಮಂಗಳ ಎಂ.ಸಿ.ವರ್ಗಿಸ್ ಪ್ರಶಸ್ತಿ (ವಾರ ಪತ್ರಿಕೆ ವಿಭಾಗ) ಕಾರಂತ ಪೆರಾಜೆ, ಅಡಿಕೆ ಪತ್ರಿಕೆ, ಪುತ್ತೂರು ರಾಘವೇಂದ್ರ ತೊಗರ್ಸಿ, ಸುಧಾ
8. ಬಂಡಾಪುರ ಮುನಿರಾಜು ಸ್ಮಾರಕ ಪ್ರಶಸ್ತಿ (ಅತ್ಯುತ್ತಮ ಸುದ್ದಿ ಛಾಯಾಚಿತ್ರಕ್ಕೆ) ಕೆ.ಆರ್. ಯೋಗೀಶ, ಜನಮಿತ್ರ, ಕಡೂರು ತಾಜುದ್ದೀನ್ ಅಜಾದ್, ಡೆಕ್ಕನ್ ಹೆರಾಲ್ಡ್, ಕಲಬುರುಗಿ
9. ಅತ್ಯುತ್ತಮ ಫೋಟೋಗ್ರಫಿ: ಪಿ.ಕೆ.ಬಡಿಗೇರ, ಬೆಳಗಾವಿ. ನಟರಾಜ್, ಹಾಸನ. ಅನುರಾಗ್ ಬಸವರಾಜು, ಮೈಸೂರು
10. ಆರ್.ಎಲ್.ವಾಸುದೇವರಾವ್ ಪ್ರಶಸ್ತಿ (ಅರಣ್ಯ ಕುರಿತ ಅತ್ಯುತ್ತಮ ಲೇಖನಕ್ಕೆ) ಪ್ರಕಾಶ್ ಎಸ್.ಶೇಟ್, ವಿಜಯವಾಣಿ, ಹುಬ್ಬಳ್ಳಿ, ಅಮರೇಶ ದೇವದುರ್ಗ, ರಾಯಚೂರು.
11. ಆರ್.ಎಲ್.ವಾಸುದೇವರಾವ್ ಪ್ರಶಸ್ತಿ (ವನ್ಯಪ್ರಾಣಿಗಳ ಕುರಿತ ಅತ್ಯುತ್ತಮ ಲೇಖನಕ್ಕೆ) ಅಖಿಲೇಶ್ ಚಿಪ್ಪಲಿ, ಪ್ರಜಾವಾಣಿ, ಶಿವಮೊಗ್ಗ
12. ಬಿ.ಜಿ.ತಿಮ್ಮಪ್ಪಯ್ಯ ಪ್ರಶಸ್ತಿ (ಆರ್ಥಿಕ ದುರ್ಬಲ ವರ್ಗದವರ ಕುರಿತ ಅತ್ಯುತ್ತಮ ವರದಿಗೆ) ಶಶಿಕಾಂತ್ ಎಸ್.ಶಂಬಳ್ಳಿ, ಪ್ರಜಾವಾಣಿ, ಬೀದರ್ ಪ್ರಕಾಶ್ ಬಾಳಕ್ಕನವರ್, ಪ್ರಜಾವಾಣಿ, ಬಾಗಲಕೋಟೆ
13. ಮಂಡಿಬೆಲೆ ಶಾಮಣ್ಣ ಸ್ಮಾರಕ ಪ್ರಶಸ್ತಿ (ಗ್ರಾಮೀಣ ಜನ-ಜೀವನದ ಅತ್ಯುತ್ತಮ ವರದಿಗೆ) ಪಿ.ಶಾಂತಕುಮಾರ್, ಕನ್ನಡ ಪ್ರಭ, ಅರಸೀಕೆರೆ. ಹೆಚ್.ಕೆ.ರಾಘವೇಂದ್ರ, ಕೋಲಾರ ಪತ್ರಿಕೆ, ಕೋಲಾರ
14. ನಾಡಪ್ರಭು ಕೆಂಪೇಗೌಡ ಸ್ಮಾರಕ ಪ್ರಶಸ್ತಿ: ನಂಜುಂಡಪ್ಪ, ದೂರದರ್ಶನ ಮತ್ತು ಆಕಾಶವಾಣಿ, ತೃಪ್ತಿ ಕುಂಬ್ರಗೋಡು, ಉದಯವಾಣಿ ಎಚ್.ಆರ್. ಅಶ್ವಿನಿ, ವಿಜಯವಾಣಿ, ಬೆಂಗಳೂರು.
15. ಯಜಮಾನ್ ಟಿ. ನಾರಾಯಣಪ್ಪ ಸ್ಮಾರಕ ಪ್ರಶಸ್ತಿ ( ಅತ್ಯುತ್ತಮ ಕೃಷಿ ವರದಿ) ಬರಗೂರು ವಿರೂಪಾಕ್ಷಪ್ಪ, ಪ್ರಜಾಪ್ರಗತಿ, ಶಿರಾ, ತುಮಕೂರು ಜಿಲ್ಲೆ ಮಾಳಿಂಗರಾಯ ಪೂಜಾರ, ಲಕ್ಷ್ಮೇಶ್ವರ, ಗದಗ
16. ನಾಡಿಗೇರ ಕೃಷ್ಣರಾಯರ ಪ್ರಶಸ್ತಿ: ರಂಜಿತ್ ಅಶ್ವತ್, ವಿಶ್ವವಾಣಿ, ಎನ್. ರಾಘವೇಂದ್ರ, ಸಂಪಾದಕರು, ವಿನೋದ ಪತ್ರಿಕೆ
17. ಅತ್ಯುತ್ತಮ ಪುಟ ವಿನ್ಯಾಸ (ಡೆಸ್ಕ್) ಜಿ.ಎಂ. ಕೊಟ್ರೇಶ್, ಕನ್ನಡ ಪ್ರಭ ಹೆಚ್.ಕೆ.ರವೀಂದ್ರನಾಥ ಹೊನ್ನೂರು
18. ನ್ಯಾಯಾಲಯದ (ಕೋರ್ಟ್ ಬೀಟ್) ಅತ್ಯುತ್ತಮ ವರದಿ:ಎಸ್.ಶ್ಯಾಮ್ ಪ್ರಸಾದ್, ಪಿಟಿಐ, ಬೆಂಗಳೂರು
19. ಸುಣ್ಣವಂಡ ಶ್ರೀನಿವಾಸ ಚಂಗಪ್ಪ ಪ್ರಶಸ್ತಿ. (ಅತ್ಯುತ್ತಮ ಸೇನಾ ವರದಿಗೆ) ಅನುಕಾರ್ಯಪ್ಪ, ರಿಪಬ್ಲಿಕ್ ಕನ್ನಡ ಟಿವಿ, ಕೊಡಗು ಜಿಲ್ಲೆ
20. ಕೆ.ಎನ್.ಸುಬ್ರಮಣ್ಯ ಪ್ರಶಸ್ತಿ ( ಇಂಗ್ಲೀಷ್ ಪತ್ರಿಕೆಯಲ್ಲಿ ಪ್ರಕಟವಾದ ವರದಿ) ಪವನ್ ಕುಮಾರ್ ಹೆಚ್, ಡೆಕ್ಕನ್ ಹೆರಾಲ್ಡ್, ಉತ್ತರ ಕನ್ನಡ ಅಕ್ಷಯ ಪಿ.ವಿ., ಸ್ಟಾರ್ ಆಫ್ ಮೈಸೂರು, ಕೊಡಗು
21. ಟಿ.ಕೆ.ಮಲಗೊಂಡ ಪ್ರಶಸ್ತಿ (ಅತ್ಯುತ್ತಮ ತನಿಖಾ ವರದಿ) ಸಿದ್ದು ಆರ್.ಜಿ.ಹಳ್ಳಿ, ಹಾವೇರಿ, ಪ್ರಜಾವಾಣಿ ಶಶಿಕಾಂತ್ ಮೆಂಡೇಗಾರ, ಬಿಜಾಪುರ.
22. ಅಪ್ಪಾಜಿಗೌಡ (ಸಿನಿಮಾ ಪ್ರಶಸ್ತಿ-ಚಲನಚಿತ್ರ ವರದಿಗೆ) ಅರುಣ್ ಕುಮಾರ, ಬೆಂಗಳೂರು ಬಬಿತಾ ಎಸ್. ವಿಜಯ ಕರ್ನಾಟಕ
23. ತಗಡೂರು ಕಮಲಮ್ಮ ವೀರೇಗೌಡ ಪ್ರಶಸ್ತಿ: ಬಿ.ಸಿ.ಚನ್ನೇಗೌಡ, ಚನ್ನರಾಯಪಟ್ಟಣ ಗುರುರಾಜ್ ಕುಲಕರ್ಣಿ, ಸಂಯುಕ್ತ ಕರ್ನಾಟಕ, ಬೀದರ್
24. ಬದರೀನಾಥ್ ಹೊಂಬಾಳೆ ಪ್ರಶಸ್ತಿ:ಕೆ. ಎನ್.ಪುಟ್ಟಲಿಂಗಯ್ಯ,ಸಂಪಾದಕರು,ಉದಯಕಾಲ ವೆಂಕಟೇಶ್ ಬಿ. ಇಮ್ರಾಪುರ, ಹೊಸ ದಿಗಂತ, ಗದಗ
25. ಅಭಿಮಾನಿ ಪ್ರಕಾಶನ ಪ್ರಶಸ್ತಿ:ವಿರೂಪಾಕ್ಷ ಕೆ. ಕವಟಗಿ, ವಿಜಯ ಕರ್ನಾಟಕ, ಚಿಕ್ಕೋಡಿ ಶಿವರಾಜ್ ಕೆಂಭಾವಿ, ಉದಯವಾಣಿ, ಲಿಂಗಸೂಗೂರು
26. ಗುಡಿಹಳ್ಳಿ ನಾಗರಾಜ್ ಪ್ರಶಸ್ತಿ: ಎಂ.ಎನ್. ಅಹೋಬಳಪತಿ, ವಿಜಯ ಕರ್ನಾಟಕ, ಚಿತ್ರದುರ್ಗ ಶ್ರೀಧರ್ ನಾಯಕ್, ಹಿರಿಯ ಪತ್ರಕರ್ತರು
27. ರವಿ ಬೆಳಗೆರೆ ಪ್ರಶಸ್ತಿ:ಟಿ. ಗುರುರಾಜ್, ಸಂಪಾದಕರು, ಹಲೋ ಮೈಸೂರು ಜಗದೀಶ್ ಬೆಳ್ಳಿಯಪ್ಪ, ಟಿವಿ-9
27. ಅತ್ಯುತ್ತಮ ತನಿಖಾ ವರದಿ: ನ್ಯೂಸ್ ಫಸ್ಟ್, ಬೆಂಗಳೂರು (ಅಂಗನವಾಡಿಗಳಿಗೆ ಮೊಟ್ಟೆ ಸರಬರಾಜು ಹಗರಣ)
28. ವಿದ್ಯುನ್ಮಾನ ಟಿ.ವಿ ವಿಭಾಗ: ಹರೀಶ್ ನಾಗರಾಜ್, ವಿಸ್ತಾರ ಟಿವಿ, ನವಿತಾ ಜೈನ್, ನ್ಯೂಸ್ 18, ರಾಚಪ್ಪ ಜೀ ಟಿವಿ

ದಶರಥ, ಟಿವಿ-5 ಮನೋಜ್ ಕುಮಾರ್, ಪವರ್ ಟಿವಿ ಮೋಹನ್ ರಾಜ್, ಕ್ಯಾಮರಾಮೆನ್, ಸುವರ್ಣ ಟಿವಿ

29. ವಿಶೇಷ ಪ್ರಶಸ್ತಿ: ನಿರ್ಮಲ ಎಲಿಗಾರ್, ಬೆಂಗಳೂರು. ಪಿ.ಬಿ.ಹರೀಶ್ ರೈ, ಮಂಗಳೂರು ಪ್ರಕಾಶ್ ಮಸ್ಕಿ, ರಾಯಚೂರು ಕೆ.ಎಸ್.ಭಾಸ್ಕರ ಶೆಟ್ಟಿ, ಬೆಂಗಳೂರು, ರಾಧಾಕೃಷ್ಣ ಭಟ್ ಭಟ್ಕಳ, ಉತ್ತರ ಕನ್ನಡ. ವೆಂಕಟೇಶ್ ಮೂರ್ತಿ, ಕಲಬುರ್ಗಿ, ಅರವಿಂದ ನಾವಡ, ಉಡುಪಿ, ರಾಜಶೇಖರ ಜೋಗಿನ್ಮನೆ, ರಮೇಶ್ ಪಾಳ್ಯ

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T